Volume : 9 | Issue : 140 | August : 16 : 2026 : Sunday
ಸಂಪುಟ : 9 | ಸಂಚಿಕೆ : 140 | ಆಗಸ್ಟ್ : 16 : 2026 : ಭಾನುವಾರ

www.VIKRAMAVAHINI.com

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

# ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ ||

VIKRAMA VAHINI
PRGI NO: KARKAN/2018/78481



ಅನುರಾಗ್ ಬಸು ಸಿನಿಮಾದ ಶೂಟಿಂಗ್‌ಗೆ ಶ್ರೀಲೀಲಾ ಮರಳಿದ್ದು, ಕಾರ್ತಿಕ್ ಆರ್ಯನ್ ಜೊತೆ ಬಾಕಿ ದೃಶ್ಯಗಳ ಚಿತ್ರೀಕರಣ ಪೂರ್ಣಗೊಳಿಸುತ್ತಿದ್ದಾರೆ.

ಉದ್ದಿನ ವಡೆಯಲ್ಲಿ ಹಲ್ಲಿ; ಪ್ರವಾಸಿಗರ ಆಕ್ರೋಶ — ಪುಟ 3

ತಿರುಮಲ ಭಕ್ತರೇ ಎಚ್ಚರ: 259 ನಕಲಿ ವೆಬ್‌ಸೈಟ್‌ಗಳು ಬಂದ್ — ಪುಟ 3



■ ಸುದ್ದಿ ಚುಟುಕು

## ಅರಣ್ಯಾಧಿಕಾರಿಗಳ ಗುಂಡೇಟಿಗೆ ಮೂವರು ಬಲಿ

● ವಿಕ್ರಮ ವಾಹಿನಿ । ಚಾಮರಾಜನಗರ

ಹನೂರು ತಾಲೂಕಿನ ಮರಿಯಮಂಗಲ ಗ್ರಾಮದ ಸಮೀಪದ ಅರಣ್ಯದಲ್ಲಿ ಅರಣ್ಯಾಧಿಕಾರಿಗಳ ಗುಂಡಿನ ದಾಳಿಗೆ ಮೂವರು ಮೃತಪಟ್ಟ ಪ್ರಕರಣಕ್ಕೆ ಸಂಬಂಧಿಸಿದಂತೆ ಕೊನೆಗೂ ಎಫ್‌ಐಆರ್ ದಾಖಲಾಗಿದೆ. ಮೃತ ಆಥೋಣಿಸಾಮಿ ಅವರ ಪತ್ನಿ ಲೂರ್ದಾಮೇರಿ ನೀಡಿದ ದೂರಿನ ಮೇರೆಗೆ ಹನೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ದೂರಿನ ಪ್ರಕಾರ, ಹಸುಗಳು ಕಾಡಿಗೆ ತೆರಳಿ ವಾಪಸ್ ಬಾರದ ಹಿನ್ನೆಲೆಯಲ್ಲಿ ಆಥೋಣಿಸಾಮಿ, ಕುಮಾರ್, ಪೀಟರ್ ಹಾಗೂ ಜೋಸೆಫ್ ಅವರನ್ನು ಹುಡುಕಲು ಅರಣ್ಯಕ್ಕೆ ತೆರಳಿದ್ದರು. ಮುಂಜಾನೆ 3ರಿಂದ 5 ಗಂಟೆ ವೇಳೆಯಲ್ಲಿ ಅರಣ್ಯ ಸಿಬ್ಬಂದಿ ಏಕಾಏಕಿ ಗುಂಡು ಹಾರಿಸಿದ್ದು, ಮೂವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎಂದು ಆರೋಪಿಸಲಾಗಿದೆ. ಜೋಸೆಫ್ ತಪ್ಪಿಸಿಕೊಂಡು ಬಂದು ಕುಟುಂಬಕ್ಕೆ ಮಾಹಿತಿ ನೀಡಿದ್ದಾನೆ.

ಇತ್ತ, ನಾಲ್ವರು ಬೇಟೆಗೆ ಬಂದಿದ್ದು, ಅರಣ್ಯ ಸಿಬ್ಬಂದಿ ಮೇಲೆ ಗುಂಡು ಹಾರಿಸಿದ ಹಿನ್ನೆಲೆಯಲ್ಲಿ ಪ್ರತಿಯಾಗಿ ಫೈರಿಂಗ್ ನಡೆಸಲಾಗಿದೆ ಎಂದು ಅರಣ್ಯಾಧಿಕಾರಿಗಳು ತಿಳಿಸಿದ್ದಾರೆ. ಸ್ಥಳದಲ್ಲಿ ನಾಡಬಂದೂಕು ಹಾಗೂ ಮಾಂಸ ಪತ್ತೆಯಾಗಿದೆ ಎನ್ನಲಾಗಿದೆ. ಪ್ರಕರಣದ ಸತ್ಯಾಸತ್ಯತೆ ತನಿಖೆಯಿಂದ ಹೊರಬರಲಿದೆ ಎಂದು ದಕ್ಷಿಣ ವಲಯ ಐಜಿಪಿ ಬೋರಲಿಂಗಯ್ಯ ತಿಳಿಸಿದ್ದಾರೆ.

ಮೃತರ ಕುಟುಂಬಸ್ಥರು ಅರಣ್ಯ ಇಲಾಖೆ ಅಧಿಕಾರಿಗಳ ವಿರುದ್ಧ ಕೊಲೆ ಆರೋಪ ಮಾಡಿದ್ದು, ಘಟನೆ ಕುರಿತು ಸಂಪೂರ್ಣ ತನಿಖೆ ನಡೆಸಿ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸಿದ್ದಾರೆ.

ಮೂವರ ಮೃತದೇಹಗಳನ್ನು ಮೈಸೂರಿನ ಕೆ.ಆರ್. ಆಸ್ಪತ್ರೆಗೆ ರವಾನಿಸಲಾಗಿದ್ದು, ಘಟನೆಗೆ ಸಂಬಂಧಿಸಿದಂತೆ ಅರಣ್ಯ ಇಲಾಖೆ ಅಧಿಕಾರಿಗಳಿಂದಲೂ ದೂರು ಪಡೆಯುವ ಸಾಧ್ಯತೆ ಇದೆ.

## 1980ರ ಕೇಸ್‌ಗೆ 46 ವರ್ಷಗಳ ಬಳಿಕ ಅಂತ್ಯ

● ವಿಕ್ರಮ ವಾಹಿನಿ । ಕಾರವಾರ

1980ರಲ್ಲಿ ದಾಖಲಾಗಿದ್ದ ಮೂರು ಕಳ್ಳತನ ಪ್ರಕರಣಗಳಲ್ಲಿ ಆರೋಪಿಯಾಗಿ, ಕಳೆದ 46 ವರ್ಷಗಳಿಂದ ನ್ಯಾಯಾಲಯದ ವಿಚಾರಣೆಯಿಂದ ತಲೆಮರೆಸಿಕೊಂಡಿದ್ದ ವ್ಯಕ್ತಿಯನ್ನು ಶಿರಸಿ ಹೊಸ ಮಾರುಕಟ್ಟೆ ಠಾಣೆ ಪೊಲೀಸರು ಕೊನೆಗೂ ಬಂಧಿಸಿದ್ದಾರೆ.

ಉಡುಪಿ ಜಿಲ್ಲೆಯ ಪರ್ಕಳ ಮೂಲದ ಮಹಮ್ಮದ್ ಯೂಸುಫ್ ಅಬ್ದುಲ್ ರೆಹಮಾನ್ ಖಾಜಾ (68) ಬಂಧಿತ ಆರೋಪಿ. 1980ರಲ್ಲಿ ಶಿರಸಿ ಹೊಸ ಮಾರುಕಟ್ಟೆ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ಮೂರು ಪ್ರತ್ಯೇಕ ಕಳ್ಳತನ ಪ್ರಕರಣಗಳಿಗೆ ಸಂಬಂಧಿಸಿದಂತೆ ಈತ ಆರೋಪಿಯಾಗಿದ್ದ.

ಆರೋಪಿಯ ಪತ್ತೆಗಾಗಿ ವಿಶೇಷ ತಂಡ ರಚಿಸಿದ್ದ ಪೊಲೀಸರು ತಾಂತ್ರಿಕ ಮಾಹಿತಿ ಹಾಗೂ ವಿವಿಧ ತನಿಖಾ ಮಾರ್ಗಗಳನ್ನು ಬಳಸಿಕೊಂಡು ಶೋಧ ನಡೆಸಿದ್ದರು. ಕೊನೆಗೆ ಆಗಸ್ಟ್ 14ರಂದು ಆತನ ಇರುವಿಕೆಯ ಬಗ್ಗೆ ಖಚಿತ ಮಾಹಿತಿ ಪಡೆದು ಕಾರ್ಯಾಚರಣೆ ನಡೆಸಿ ಬಂಧಿಸಿದ್ದಾರೆ. ಬಳಿಕ ಆರೋಪಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದ್ದು, ನ್ಯಾಯಾಲಯ ನ್ಯಾಯಾಂಗ ಬಂಧನ ವಿಧಿಸಿದೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೀಪನ್ ಎಂ.ಎನ್. ಅವರ ಮಾರ್ಗದರ್ಶನದಲ್ಲಿ, ಶಿರಸಿ ಉಪವಿಭಾಗದ ಡಿವೈಎಸ್‌ಪಿ ಗೀತಾ ಪಾಟೀಲ್ ಹಾಗೂ ಸಿಪಿಐ ಸಂಪತ್ ಇ.ಸಿ. ಅವರ ಮೇಲ್ವಿಚಾರಣೆಯಲ್ಲಿ ವಿಶೇಷ ತಂಡ ಕಾರ್ಯಾಚರಣೆ ನಡೆಸಿತು.

ಪಿಎಸ್‌ಐ ಬಸವರಾಜ ಕನಶೆಟ್ಟಿ ಹಾಗೂ ಪಿಎಸ್‌ಐ ಗೀತಾ ಕಲಘಟಗಿ ನೇತೃತ್ವದ ತಂಡದಲ್ಲಿ ಪೊಲೀಸ್ ಸಿಬ್ಬಂದಿ ಮತ್ತು ತಾಂತ್ರಿಕ ವಿಭಾಗದ ಅಧಿಕಾರಿಗಳು ಭಾಗವಹಿಸಿದ್ದರು. ದಶಕಗಳಷ್ಟು ಹಳೆಯ ಪ್ರಕರಣದ ಆರೋಪಿಯನ್ನು ಪತ್ತೆಹಚ್ಚಿ ಬಂಧಿಸಿದ ಪೊಲೀಸರ ಕಾರ್ಯಕ್ಕೆ ಜಿಲ್ಲಾ ಪೊಲೀಸ್ ಇಲಾಖೆ ಮೆಚ್ಚುಗೆ ವ್ಯಕ್ತಪಡಿಸಿದೆ.

46 ವರ್ಷಗಳಿಂದ ತಲೆಮರೆಸಿಕೊಂಡಿದ್ದ ಆರೋಪಿಯನ್ನು ಪತ್ತೆಹಚ್ಚುವಲ್ಲಿ ಪೊಲೀಸರ ತಾಂತ್ರಿಕ ತನಿಖೆ ಪ್ರಮುಖ ಪಾತ್ರವಹಿಸಿದೆ.

ಹಳೆಯ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಯ ಬಂಧನವಾಗಿರುವುದು ಪೊಲೀಸರ ತನಿಖಾ ಸಾಮರ್ಥ್ಯಕ್ಕೆ ಸಾಕ್ಷಿಯಾಗಿದೆ.

# 2047ರೊಳಗೆ 'ವಿಕಸಿತ ಭಾರತ'ದ ಗುರಿ

● ವಿಕ್ರಮ ವಾಹಿನಿ । ನವದೆಹಲಿ

2047ರ ವೇಳೆಗೆ 'ವಿಕಸಿತ ಭಾರತ'ದ ಕನಸನ್ನು ನನಸಾಗಿಸಲು ದೇಶದ 140 ಕೋಟಿ ಜನರು ಒಗ್ಗಟ್ಟಿನಿಂದ, ಪರಿಶ್ರಮ ಹಾಗೂ ಸಂಕಲ್ಪದೊಂದಿಗೆ ಕಾರ್ಯನಿರ್ವಹಿಸಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿದರು. ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ದೆಹಲಿಯ ಕೆಂಪುಕೋಟೆಯಲ್ಲಿ ಧ್ವಜಾರೋಹಣ ನೆರವೇರಿಸಿ ದೇಶವನ್ನುದ್ದೇಶಿಸಿ ಮಾತನಾಡಿದ ಅವರು, ಭಾರತದ ಸ್ವಾತಂತ್ರ್ಯದ 100ನೇ ವರ್ಷವಾದ 2047ರ ವೇಳೆಗೆ ದೇಶವನ್ನು ಸಂಪೂರ್ಣ ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ರೂಪಿಸುವುದು ರಾಷ್ಟ್ರೀಯ ಗುರಿಯಾಗಬೇಕು ಎಂದರು. ಈ ಸಂಕಲ್ಪವನ್ನು ಸಾಕಾರಗೊಳಿಸಲು ಪ್ರತಿಯೊಬ್ಬ ನಾಗರಿಕನ ಕೊಡುಗೆ ಅಗತ್ಯ ಎಂದು ಹೇಳಿದರು.



ಕಳೆದ 12 ವರ್ಷಗಳಲ್ಲಿ ಭಾರತದ ಬಗ್ಗೆ ವಿಶ್ವದ ದೃಷ್ಟಿಕೋನವೇ ಬದಲಾಗಿದೆ. ಆರ್ಥಿಕತೆ, ತಂತ್ರಜ್ಞಾನ, ರಕ್ಷಣಾ ಉತ್ಪಾದನೆ, ಡಿಜಿಟಲ್ ವ್ಯವಸ್ಥೆ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ದೇಶ ಗಮನಾರ್ಹ ಪ್ರಗತಿ ಸಾಧಿಸಿದೆ.

ದೇಶೀಯ ಉತ್ಪನ್ನಗಳಿಗೆ ಆದ್ಯತೆ ನೀಡುವ ಮೂಲಕ ಸ್ವಾವಲಂಬಿ ಭಾರತ ನಿರ್ಮಾಣದ ಪ್ರಯತ್ನವನ್ನು ಮತ್ತಷ್ಟು ಬಲಪಡಿಸಬೇಕಿದೆ ಎಂದು ಪ್ರಧಾನಿ ಹೇಳಿದರು.

ಕಳೆದ ವರ್ಷಗಳಲ್ಲಿ ದಲಿತರು, ಶೋಷಿತರು, ಬಡವರು, ಮಧ್ಯಮ ವರ್ಗದವರು ಹಾಗೂ ಯುವಜನರು ದೇಶದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಿದ್ದಾರೆ. ಇದರ ಪರಿಣಾಮವಾಗಿ ಸುಮಾರು 25 ಕೋಟಿ ಜನರು ಬಡತನದಿಂದ ಹೊರಬಂದಿದ್ದಾರೆ ಎಂದು ಮೋದಿ ತಿಳಿಸಿದರು.

**ರಕ್ಷಣಾ ಉತ್ಪಾದನೆಗೆ ಒತ್ತು**

ಭಾರತ ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮುತ್ತಿದೆ. ರಕ್ಷಣಾ ಉತ್ಪಾದನೆಗೆ ಹೆಚ್ಚಿನ ಒತ್ತು ನೀಡಲಾಗಿದ್ದು, ಕಳೆದ 12 ವರ್ಷಗಳಲ್ಲಿ ರಕ್ಷಣಾ ಉತ್ಪಾದನೆ ನಾಲ್ಕು ಪಟ್ಟು ಹೆಚ್ಚಾಗಿದೆ ಎಂದು ಪ್ರಧಾನಿ ಹೇಳಿದರು.

ಅದೇ ರೀತಿ ಖಾದಿ ಮತ್ತು ಗ್ರಾಮೋದ್ಯಮದ ಉತ್ಪಾದನೆ ಐದು ಪಟ್ಟು, ಎಲೆಕ್ಟ್ರಾನಿಕ್ಸ್ ಉತ್ಪಾದನೆ ಏಳು ಪಟ್ಟು ಹೆಚ್ಚಾಗಿದೆ. ಮೊಬೈಲ್ ಫೋನ್ ಉತ್ಪಾದನೆಯಲ್ಲೂ ಗಣನೀಯ ಏರಿಕೆಯಾಗಿದೆ.

**ತಂತ್ರಜ್ಞಾನ, ಇಂಧನ ಭದ್ರತೆಗೆ ಆದ್ಯತೆ**

ಕೃತಕ ಬುದ್ಧಿಮತ್ತೆ, ಅಣುಶಕ್ತಿ, ದೂರಸಂಪರ್ಕ, ಡಿಜಿಟಲ್ ತಂತ್ರಜ್ಞಾನ ಮತ್ತು ರೈಲ್ವೆ ಕ್ಷೇತ್ರಗಳ ಅಭಿವೃದ್ಧಿಗೆ ಸರ್ಕಾರ ಹೆಚ್ಚಿನ ಆದ್ಯತೆ ನೀಡುತ್ತಿದೆ. ಭಾರತದ ಭವಿಷ್ಯದ ಆರ್ಥಿಕ ಬೆಳವಣಿಗೆಗೆ ಇಂಧನ ಭದ್ರತೆ ಅತ್ಯಂತ ಪ್ರಮುಖವಾಗಿದ್ದು, ಈ ಕ್ಷೇತ್ರದಲ್ಲೂ ಸ್ವಾವಲಂಬನೆ ಸಾಧಿಸುವತ್ತ ಗಮನ ಹರಿಸಲಾಗುತ್ತಿದೆ ಎಂದು ಪ್ರಧಾನಿ ಹೇಳಿದರು.

'ವಿಕಸಿತ ಭಾರತ'ದ ಗುರಿ ಕೇವಲ ಸರ್ಕಾರದ ಯೋಜನೆಯಲ್ಲ; ಇದು ಪ್ರತಿಯೊಬ್ಬ ಭಾರತೀಯನ ಸಂಕಲ್ಪವಾಗಬೇಕು. 140 ಕೋಟಿ ಜನರು ಒಗ್ಗಟ್ಟಿನಿಂದ ಶ್ರಮಿಸಿದರೆ 2047ರ ಗುರಿಯನ್ನು ಸಾಧಿಸುವುದು ಸಾಧ್ಯ ಎಂದು ಮೋದಿ ವಿಶ್ವಾಸ ವ್ಯಕ್ತಪಡಿಸಿದರು.



ನವದೆಹಲಿಯ ಐತಿಹಾಸಿಕ ಕೆಂಪುಕೋಟೆಯ ಆವರಣದಲ್ಲಿ ಶನಿವಾರ ನಡೆದ 80ನೇ ಸ್ವಾತಂತ್ರ್ಯ ದಿನಾಚರಣೆಯ ಸಂಭ್ರಮದ ಕ್ಷಣಗಳು. ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ ರಾಷ್ಟ್ರಭಕ್ತಿ, ಏಕತೆ ಹಾಗೂ ದೇಶದ ಅಭಿವೃದ್ಧಿಯ ಸಂಕಲ್ಪ ಅನುರಣಿಸಿತು.

## ಹೊಸ ಸಂಕಲ್ಪದೊಂದಿಗೆ ವಿಕಸಿತ ಭಾರತದ ಪಯಣ

- ಇಂದು ಪ್ರತಿಯೊಂದು ಹೃದಯವೂ 'ವಂದೇ ಮಾತರಂ'ದ ಲಯದೊಂದಿಗೆ ಮಿಡಿಯುತ್ತಿದೆ. ಇಂದು ಪ್ರತಿಯೊಂದು ಮನೆಯಲ್ಲೂ ತಿರಂಗಾ ಇದೆ, ಪ್ರತಿಯೊಂದು ಮನಸ್ಸಿನಲ್ಲೂ ತಿರಂಗಾ ಇದೆ.
- ಈ ಸ್ವಾತಂತ್ರ್ಯ ದಿನದಂದು ಬಾಪು (ಮಹಾತ್ಮ ಗಾಂಧೀಜಿ) ಹಾಗೂ ಎಲ್ಲಾ ಸ್ವಾತಂತ್ರ್ಯ ಹೋರಾಟಗಾರರು ಮತ್ತು ಕ್ರಾಂತಿಕಾರಿಗಳಿಗೆ ನಾನು ಗೌರವಪೂರ್ವಕ ನಮನ ಸಲ್ಲಿಸುತ್ತೇನೆ. ಇದು ಐತಿಹಾಸಿಕ ದಿನ. ಸ್ವಾತಂತ್ರ್ಯಾ ನಂತರ ಇದೇ ಮೊದಲ ಬಾರಿಗೆ ಕೆಂಪುಕೋಟೆಯ ಗೋಡೆಗಳಿಂದ 'ವಂದೇ ಮಾತರಂ' ಘೋಷಣೆ ಪ್ರತಿಧ್ವನಿಸಿದೆ.
- ಇಂದು ನಾವು 80ನೇ ಸ್ವಾತಂತ್ರ್ಯ ದಿನವನ್ನು ಆಚರಿಸುತ್ತಿದ್ದೇವೆ. ಇಂದು 'ವಂದೇ ಮಾತರಂ' ಘೋಷಣೆ ಪ್ರತಿಯೊಂದು ಹೃದಯದಲ್ಲೂ ಪ್ರತಿಧ್ವನಿಸುತ್ತಿದೆ. ಇಂದು ಪ್ರತಿಯೊಂದು ಮನೆಯಲ್ಲೂ ತ್ರಿವರ್ಣ ಧ್ವಜ ಹಾರಾಡುತ್ತಿದೆ ಮತ್ತು ಪ್ರತಿಯೊಂದು ಮನಸ್ಸಿನಲ್ಲೂ ತಿರಂಗಾ ನೆಲೆಸಿದೆ. ಹೊಸ ಸಂಕಲ್ಪಗಳೊಂದಿಗೆ ಉತ್ಸಾಹ ಮತ್ತು ಹುಮ್ಮಸ್ಸಿನಿಂದ ದೇಶ ಮುನ್ನಡೆಯುತ್ತಿದೆ.
- ಕಳೆದ ಕೆಲವು ದಿನಗಳಲ್ಲಿ ದೇಶದ ಕೆಲವು ಭಾಗಗಳು ಪ್ರವಾಹಕ್ಕೆ ತುತ್ತಾಗಿದ್ದು, ಅನೇಕ ಜನರು ಇದರಿಂದ ಬಾಧಿತರಾಗಿದ್ದಾರೆ. ಸಂಕಷ್ಟಕ್ಕೆ ಒಳಗಾದ ಕುಟುಂಬಗಳಿಗೆ ಇಡೀ ದೇಶವೇ ಅವರೊಂದಿಗೆ ನಿಂತಿದೆ ಎಂಬ ಭರವಸೆಯನ್ನು ನಾನು ನೀಡುತ್ತೇನೆ.
- 2047ರ ವೇಳೆಗೆ ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡುವ ಮಹತ್ವದ ಕನಸು ಇಂದು ನಮ್ಮ ಮುಂದಿದೆ. ವಿಶ್ವದ ಅತಿ ಹೆಚ್ಚು ಜನಸಂಖ್ಯೆ ಹೊಂದಿರುವ ದೇಶವು ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವ ಸಂಕಲ್ಪ ಮಾಡಿದಾಗ, ಅದು ನಮ್ಮ ಧೈರ್ಯ ಮತ್ತು ಸಾಮರ್ಥ್ಯಕ್ಕೆ ಸಾಕ್ಷಿಯಾಗುತ್ತದೆ. ಜಗತ್ತು ಭಾರತವನ್ನು ವಿಭಿನ್ನ ದೃಷ್ಟಿಕೋನದಿಂದ ನೋಡುವಂತೆ ಆಗುತ್ತದೆ.
- ಇತ್ತೀಚೆಗೆ ದೇಶದ ಕೆಲವು ಭಾಗಗಳು ಪ್ರವಾಹ ಮತ್ತು ಭೂಕುಸಿತದ ಭೀಕರ ಪರಿಣಾಮವನ್ನು ಎದುರಿಸಿವೆ. ಅವರ ನೋವಿಗೆ ನಾವು ಆಳವಾದ ಸಹಾನುಭೂತಿ ವ್ಯಕ್ತಪಡಿಸುತ್ತೇವೆ. ಸಂಕಷ್ಟಕ್ಕೆ ಒಳಗಾದ ಕುಟುಂಬಗಳಿಗೆ ನಾವು ಹಾಗೂ ಇಡೀ ದೇಶ ನಿಮ್ಮೊಂದಿಗಿದ್ದೇವೆ ಎಂದು ನಾನು ಭರವಸೆ ನೀಡುತ್ತೇನೆ.
- ಒಂದು ರಾಷ್ಟ್ರವು ತನ್ನ ಕನಸುಗಳು, ಸಂಕಲ್ಪ ಮತ್ತು ತನ್ನೊಳಗಿನ ಶಕ್ತಿಯಿಂದ ಮುನ್ನಡೆದಾಗ ಮಾತ್ರ ಮಹಾನ್ ಆಗುತ್ತದೆ ಮತ್ತು ತನ್ನ ಗುರಿಗಳನ್ನು ಸಾಧಿಸುತ್ತದೆ. ಇನ್ನು ಸಣ್ಣ ಕನಸುಗಳು ಸಾಕಾಗುವುದಿಲ್ಲ. ನಾವು ದೊಡ್ಡ ಕನಸುಗಳನ್ನು ಕಾಣಬೇಕು. ಏಕೆಂದರೆ ದೊಡ್ಡ ಕನಸುಗಳು ನಮ್ಮ ಚಿಂತನೆಗಳನ್ನು ವಿಸ್ತರಿಸುತ್ತವೆ ಮತ್ತು ನಮ್ಮ ದೃಷ್ಟಿಕೋನದ ವ್ಯಾಪ್ತಿಯನ್ನು ಹೆಚ್ಚಿಸುತ್ತವೆ. ನಮ್ಮ ಸಂಕಲ್ಪ ದೃಢವಾಗಿರಬೇಕು. ಸಂಕಲ್ಪ ಗಟ್ಟಿಯಾಗಿದ್ದಾಗ, ಕಷ್ಟಗಳು ಮತ್ತು ವಿಪತ್ತುಗಳ ನಡುವೆಯೂ ಮುಂದೆ ಸಾಗುವ ದಾರಿಯನ್ನು ಕಂಡುಕೊಳ್ಳುವ ಸಾಮರ್ಥ್ಯ ಸಹಜವಾಗಿಯೇ ಮೂಡುತ್ತದೆ.
- ನಾವೂ ಒಂದು ಮಹತ್ವಾಕಾಂಕ್ಷೆಯ ಕನಸನ್ನು ಕಂಡಿದ್ದೇವೆ. ದೃಢ ಸಂಕಲ್ಪದೊಂದಿಗೆ ಹೊಸ ಎತ್ತರಗಳನ್ನು ತಲುಪುವ ಕನಸು. ಸ್ವಾತಂತ್ರ್ಯದ 100ನೇ ವರ್ಷವಾದ 2047ರ ವೇಳೆಗೆ ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಪರಿವರ್ತಿಸುವುದು ನಮ್ಮ ದೃಷ್ಟಿಯಾಗಿದೆ.

# ಅಭಿವೃದ್ಧಿಯ ತೇರಿಗೆ ಕೈಜೋಡಿಸಿ: ಡಿ.ಕೆ.ಶಿ

● ವಿಕ್ರಮ ವಾಹಿನಿ । ಬೆಂಗಳೂರು

"ರಾಜ್ಯದ ಅಭಿವೃದ್ಧಿಯ ತೇರನ್ನು ಎಳೆಯಲು ಕೇವಲ ಎರಡು ಕೈಗಳು ಸಾಲುವುದಿಲ್ಲ. ಕನ್ನಡ ಕುಲಕೋಟಿಯ ಕೈಗಳು ನನ್ನ ಜೊತೆ ಕೈಜೋಡಿಸಬೇಕು. ಬನ್ನಿ, ಅಭಿವೃದ್ಧಿಯ ತೇರನ್ನು ಒಟ್ಟಾಗಿ ಎಳೆಯೋಣ" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ರಾಜ್ಯದ ಜನತೆಗೆ ಕರೆ ನೀಡಿದರು.

ಮಾಣಿಕ್ ಷಾ ಮೈದಾನದಲ್ಲಿ ಶನಿವಾರ ನಡೆದ 80ನೇ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಧ್ವಜಾರೋಹಣ ನೆರವೇರಿಸಿದ ನಂತರ ರಾಜ್ಯದ ಜನತೆಯನ್ನು ಉದ್ದೇಶಿಸಿ ಮಾತನಾಡಿದರು.

"ನನ್ನನ್ನು ನಂಬಿ ಇಲ್ಲಿಯವರೆಗೆ ಕರೆತಂದ ನಾಡಿನ ಜನತೆಗೆ ನಾನು "ಸಾಕ್ಷಿಗುಡ್ಡೆ" ಉಳಿಸುತ್ತೇನೆ. ಕರ್ನಾಟಕದ ಅಭಿವೃದ್ಧಿ ಮತ್ತು ಭಾರತದ ಅಭಿವೃದ್ಧಿ ಒಂದಕ್ಕೊಂದು ಪೂರಕವಾಗಿದ್ದು, ಜ್ಞಾನ, ವಿಜ್ಞಾನ, ತಂತ್ರಜ್ಞಾನ, ಕೈಗಾರಿಕೆ, ಕೃಷಿ, ಆರ್ಥಿಕತೆ ಹಾಗೂ ಸಂಸ್ಕೃತಿಯಲ್ಲಿ ದೇಶಕ್ಕೆ ದಾರಿ ತೋರಿಸುತ್ತಿರುವ ಕರ್ನಾಟಕದ ಶಕ್ತಿಯನ್ನು ಮತ್ತಷ್ಟು ಬೆಳೆಸುವುದು ಸರ್ಕಾರದ ಗುರಿಯಾಗಿದೆ" ಎಂದು ಹೇಳಿದರು.

**ಮಾನವ ಧರ್ಮಕ್ಕೆ ಜಯವಾಗಲಿ:** "ಮಾನವ ಧರ್ಮಕ್ಕೆ ಜಯವಾಗಲಿ ಎಂದು ಹೇಳಿದ ಮುಖ್ಯಮಂತ್ರಿಯವರು, ವಿಶ್ವಮಾನವ ಸಂದೇಶ ಸಾರಿದ ಕುವೆಂಪು ಅವರ ಅನಿಕೇತನದ ಆಶಯವನ್ನು ನೆನಪಿಸಿಕೊಂಡರು. ನೂರು ಮತದ ಹೊಟ್ಟ ತೂರಿ/ ಎಲ್ಲ ತತ್ವದ ಎಲ್ಲೆ ಮೀರಿ/ ನಿರ್ದಿಗಂತವಾಗಿ ಏರಿ/ ಓ ನನ್ನ ಚೇತನ/ ಆಗು ನೀ ಅನಿಕೇತನ, ಕವನದ ಸಾಲುಗಳನ್ನು ಓದಿ ಕನ್ನಡ ಮಣ್ಣಿನ ಮೌಲ್ಯಗಳನ್ನು ನಿತ್ಯದ ಬದುಕಿನಲ್ಲಿ ಪಾಲಿಸೋಣ" ಎಂದು ಕರೆ ನೀಡಿದರು.



**2047ರ ವೇಳೆಗೆ ರೂ 320 ಲಕ್ಷ ಕೋಟಿ ಆರ್ಥಿಕತೆಯ ಗುರಿ:** ಕರ್ನಾಟಕದ ತಲಾ ಆದಾಯ ರೂ 4.33 ಲಕ್ಷ ತಲುಪಿದ್ದು, ಜಿಎಸ್ಟಿ ಮತ್ತು ಆದಾಯ ತೆರಿಗೆ ಸಂಗ್ರಹಣೆಯಲ್ಲಿ ರಾಜ್ಯ ಎರಡನೇ ಸ್ಥಾನದಲ್ಲಿದೆ. ಶಿಕ್ಷಣ, ಆರೋಗ್ಯ, ಕೃಷಿ, ಕೈಗಾರಿಕೆ ಮತ್ತು ಮೂಲಸೌಕರ್ಯಗಳಲ್ಲಿ ಹೂಡಿಕೆ ಮಾಡುವ ಮೂಲಕ 2047ರ ವೇಳೆಗೆ ಕರ್ನಾಟಕದ ಆರ್ಥಿಕತೆಯನ್ನು 3 ಟ್ರಿಲಿಯನ್ ಡಾಲರ್, ಅಂದರೆ ರೂ 320 ಲಕ್ಷ ಕೋಟಿಗೆ ಕೊಂಡೊಯ್ಯುವ ಗುರಿ ಹೊಂದಲಾಗಿದೆ" ಎಂದರು.

ರೈತರ ಅನುಭವಕ್ಕೆ ಆಧುನಿಕ ತಂತ್ರಜ್ಞಾನವನ್ನು ಜೋಡಿಸಲು ಮುಖ್ಯಮಂತ್ರಿ ರೈತ ಚೈತನ್ಯ ಯೋಜನೆ ಜಾರಿಯಾಗಲಿದ್ದು, ಡ್ರೋನ್ ಮತ್ತು ಉಪಗ್ರಹ ಚಿತ್ರಗಳ ಮೂಲಕ ಬೆಳೆ ಸಮೀಕ್ಷೆ ನಡೆಸಲಾಗುವುದು. ಸಣ್ಣ ರೈತರಿಗೆ ಕೃಷಿ ಯಂತ್ರೋಪಕರಣಗಳನ್ನು ಬಾಡಿಗೆಗೆ ಪಡೆಯಲು 'ರೈತ ಮಿತ್ರ ಯೋಜನೆ' ಜಾರಿಗೊಳಿಸಲಾಗುವುದು. ಮೂರು ಎಕರೆ ಅಥವಾ ಅದಕ್ಕಿಂತ ಕಡಿಮೆ ಭೂಮಿ ಹೊಂದಿರುವ ರೈತರಿಗೆ ಬಾಡಿಗೆ ಶುಲ್ಕದ ಮೇಲೆ ಶೇ 50 ರಷ್ಟು ಸಹಾಯಧನ ನೀಡಲಾಗುವುದು" ಎಂದು ಅಭಯ ನೀಡಿದರು.

"ಕೃಷಿ ಆರ್ಥಿಕತೆಯ ಬೆನ್ನೆಲುಬಾಗಿದ್ದು, ಬೆಳೆ ವಿಮಾ ಯೋಜನೆಯಡಿ 12.35 ಲಕ್ಷ ರೈತರಿಗೆ 1,300 ಕೋಟಿ ರೂಪಾಯಿ ಪರಿಹಾರ ನೀಡಲಾಗಿದೆ. 25 ಲಕ್ಷ ರೈತರು ಬೆಳೆ ವಿಮೆಗೆ ನೋಂದಾಯಿಸಿಕೊಂಡಿದ್ದಾರೆ. 2 ಲಕ್ಷ ಹೆಕ್ಟೇರ್ ಪ್ರದೇಶಕ್ಕೆ ಸೂಕ್ಷ್ಮ ನೀರಾವರಿ ವಿಸ್ತರಿಸಲಾಗಿದ್ದು, 184 ಹೈಟೆಕ್ ಹಾರ್ವೆಸ್ಟರ್ ಹಬ್ ಗಳನ್ನು ಸ್ಥಾಪಿಸಲಾಗಿದೆ" ಎಂದು ವಿವರಿಸಿದರು. 3ನೇ ಪುಟಕ್ಕೆ..

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481
ವಿಕ್ರಮ ವಾಹಿನಿ

## ಸವಿ ವಾಹಿನಿ

ಪ್ರತಿ ದಿನವನ್ನು ನಿಮ್ಮ ದಿನವಾಗಿ ಕಳೆಯಿರಿ. ನಿಮ್ಮೆಡೆಗೆ ಬರುತ್ತಿರುವ ಎಲ್ಲ ಅವಕಾಶಗಳನ್ನು ಎರಡು ತೋಳುಗಳನ್ನು ಚಾಚಿ ಬಾಚಿ ಅಪ್ಪಿಕೊಳ್ಳಿ. ಏಕೆಂದರೆ ಕೆಲವೊಂದಿಷ್ಟು ಅವಕಾಶಗಳು ಕೇವಲ ಒಂದೇ ಸಲ ಬರುತ್ತವೆ, ಪದೇಪದೇ ಬರುವುದಿಲ್ಲ.

## ದಿನ ಪಂಚಾಂಗ

ಆಗಸ್ಟ್, 16-2026 ವರ್ಷ ಋತು, ಶ್ರಾವಣ ಮಾಸ, ಶುದ್ಧ ಪಕ್ಷ. ಚೌತಿ ತಿಥಿ ಸಾ-6:54
ಉತ್ತರಾ ನಕ್ಷತ್ರ ಬೆ-6:26
ರಾಹುಕಾಲ ಸಾ-5:05-6:39
ಆಡಿ ಶುಕ್ರವಾರ, ಲೋಕಾಪುರ ವಿನಾಯಕೀ ಚತುರ್ಥಿ, ನಾಗಚತುರ್ಥಿ, ಹೊಸಹೊಳಲು ಉತ್ಸವ, ಜಾಗವೇಲು ಜಾತ್ರೆ

## ಆಧ್ಯಾತ್ಮ

# ಪವಿತ್ರ ಶ್ರಾವಣ ಮಾಸದ ವಿಶೇಷತೆ

ಹಿಂದೂ ಧರ್ಮದಲ್ಲಿ ಅತ್ಯಂತ ಪವಿತ್ರ ಮಾಸಗಳಲ್ಲಿ ಒಂದಾಗಿರುವ ಶ್ರಾವಣ ಮಾಸ ಆರಂಭವಾಗಿದ್ದು, ದೇಶಾದ್ಯಂತ ಭಕ್ತಿಯ ವಾತಾವರಣ ನಿರ್ಮಾಣವಾಗಿದೆ. ಮಳೆಗಾಲದ ಸಂದರ್ಭದಲ್ಲಿ ಬರುವ ಈ ಮಾಸದಲ್ಲಿ ಶಿವಾರಾಧನೆಗೆ ವಿಶೇಷ ಮಹತ್ವ ನೀಡಲಾಗುತ್ತದೆ. ಶ್ರಾವಣ ಸೋಮವಾರ, ಮಂಗಳ ಗೌರಿ ವ್ರತ, ನಾಗರ ಪಂಚಮಿ, ವರಮಹಾಲಕ್ಷ್ಮಿ ವ್ರತ ಹಾಗೂ ರಕ್ಷಾ ಬಂಧನ ಸೇರಿದಂತೆ ಹಲವು ಪ್ರಮುಖ ಹಬ್ಬಗಳು ಈ ಅವಧಿಯಲ್ಲಿ ಆಚರಿಸಲಾಗುತ್ತವೆ.

ಪೌರಾಣಿಕ ನಂಬಿಕೆಯ ಪ್ರಕಾರ, ಸಮುದ್ರ ಮಂಥನದ ವೇಳೆ ಹೊರಬಂದ ವಿಷವನ್ನು ಲೋಕದ ರಕ್ಷಣೆಗಾಗಿ ಶಿವನು ಸೇವಿಸಿದನು. ವಿಷದ ಉರಿಯನ್ನು ತಣಿಸಲು ದೇವತೆಗಳು ಶಿವನಿಗೆ ಗಂಗಾಜಲ ಅರ್ಪಿಸಿದರು ಎಂಬ ನಂಬಿಕೆ ಇದೆ. ಹೀಗಾಗಿ ಶ್ರಾವಣ ಮಾಸದಲ್ಲಿ ಶಿವಲಿಂಗಕ್ಕೆ ನೀರು, ಹಾಲು ಹಾಗೂ ಬಿಲ್ವಪತ್ರೆ ಅರ್ಪಿಸಿ ಪೂಜಿಸುವ ಸಂಪ್ರದಾಯ ಬೆಳೆದು ಬಂದಿದೆ. ಈ ಅವಧಿಯಲ್ಲಿ ಶಿವನ ಆರಾಧನೆ ಮಾಡಿದರೆ ಮನಸ್ಸಿಗೆ ಶಾಂತಿ, ಕುಟುಂಬಕ್ಕೆ ಸುಖ-ಸಮೃದ್ಧಿ ದೊರೆಯುತ್ತದೆ ಎಂಬುದು ಭಕ್ತರ ನಂಬಿಕೆಯಾಗಿದೆ.

**ಶ್ರಾವಣ ಸೋಮವಾರಕ್ಕೆ ವಿಶೇಷ ಮಹತ್ವ**

ಶ್ರಾವಣ ಮಾಸದ ಪ್ರತಿ ಸೋಮವಾರವೂ ಶಿವಭಕ್ತರಿಗೆ ವಿಶೇಷ ದಿನ. ಭಕ್ತರು ಉಪವಾಸ ಅಥವಾ ವ್ರತ ಆಚರಿಸಿ, ಶಿವ ದೇವಾಲಯಗಳಿಗೆ ತೆರಳಿ ಅಭಿಷೇಕ, ಪೂಜೆ ಹಾಗೂ ವಿಶೇಷ ಪ್ರಾರ್ಥನೆ ಸಲ್ಲಿಸುತ್ತಾರೆ. ಅವಿವಾಹಿತ ಯುವತಿಯರು ಉತ್ತಮ ಜೀವನ ಸಂಗಾತಿಗಾಗಿ ಹಾಗೂ ವಿವಾಹಿತ ಮಹಿಳೆಯರು ಪತಿ ಮತ್ತು ಕುಟುಂಬದ ಆರೋಗ್ಯ, ಆಯುಷ್ಯ ಹಾಗೂ ಕ್ಷೇಮಕ್ಕಾಗಿ ಶ್ರಾವಣ ಸೋಮವಾರದ ವ್ರತ ಆಚರಿಸುವುದು ಸಾಮಾನ್ಯ.

**ಸಾಲು ಸಾಲು ಹಬ್ಬಗಳ ಸಂಭ್ರಮ**

ಶ್ರಾವಣ ಮಾಸದಲ್ಲಿ ಮಂಗಳ ಗೌರಿ ವ್ರತ, ನಾಗರ ಪಂಚಮಿ, ವರಮಹಾಲಕ್ಷ್ಮಿ ವ್ರತ ಹಾಗೂ ರಕ್ಷಾ ಬಂಧನ ಸೇರಿದಂತೆ ಹಲವು ಹಬ್ಬಗಳು ಬರುತ್ತವೆ. ಶ್ರಾವಣದ ಮಂಗಳವಾರಗಳಲ್ಲಿ ಮಂಗಳ ಗೌರಿ ವ್ರತವನ್ನು ಸುಮಂಗಲಿಯರು ಆಚರಿಸುತ್ತಾರೆ. ನಾಗರ ಪಂಚಮಿಯಂದು ನಾಗದೇವತೆಗೆ ಪೂಜೆ ಸಲ್ಲಿಸುವ ಸಂಪ್ರದಾಯವಿದೆ. ವರಮಹಾಲಕ್ಷ್ಮಿ ವ್ರತದಂದು ಮಹಿಳೆಯರು ಲಕ್ಷ್ಮಿ ದೇವಿಯನ್ನು ಶ್ರದ್ಧಾಭಕ್ತಿಯಿಂದ ಆರಾಧಿಸಿ ಕುಟುಂಬದ ಸುಖ-ಸಮೃದ್ಧಿಗಾಗಿ ಪ್ರಾರ್ಥಿಸುತ್ತಾರೆ. ಶ್ರಾವಣ ಪೌರ್ಣಮಿಯಂದು ಸಹೋದರ-ಸಹೋದರಿಯರ ಬಾಂಧವ್ಯದ ಸಂಕೇತವಾದ ರಕ್ಷಾ ಬಂಧನ ಆಚರಿಸಲಾಗುತ್ತದೆ.

**ಆರೋಗ್ಯದ ದೃಷ್ಟಿಯಿಂದಲೂ ಮಹತ್ವ**

ಧಾರ್ಮಿಕ ಆಚರಣೆಗಳ ಜೊತೆಗೆ ಶ್ರಾವಣ ಮಾಸದ ಆಹಾರ ಪದ್ಧತಿಗೂ ಮಹತ್ವವಿದೆ. ಮಳೆಗಾಲದಲ್ಲಿ ಜೀರ್ಣಕ್ರಿಯೆಯಲ್ಲಿ ಬದಲಾವಣೆ ಉಂಟಾಗುವ ಸಾಧ್ಯತೆ ಇರುವುದರಿಂದ ಹಗುರವಾದ ಮತ್ತು ಸುಲಭವಾಗಿ ಜೀರ್ಣವಾಗುವ ಆಹಾರ ಸೇವಿಸುವುದು ಸೂಕ್ತ. ಹಣ್ಣು, ತರಕಾರಿ, ಧಾನ್ಯಗಳು ಸೇರಿದಂತೆ ಪೌಷ್ಟಿಕ ಸಾತ್ವಿಕ ಆಹಾರ ಸೇವನೆಗೆ ಆದ್ಯತೆ ನೀಡಬಹುದು. ಉಪವಾಸ ಮಾಡುವವರು ತಮ್ಮ ಆರೋಗ್ಯ ಮತ್ತು ದೈಹಿಕ ಅಗತ್ಯಕ್ಕೆ ಅನುಗುಣವಾಗಿ ಆಹಾರ ಸೇವಿಸಬೇಕು.

**ಭಕ್ತಿ ಜೊತೆಗೆ ಉತ್ತಮ ಜೀವನಶೈಲಿ**

ಶ್ರಾವಣ ಮಾಸದಲ್ಲಿ ಬೆಳಗ್ಗೆ ಬೇಗ ಎದ್ದು ಸ್ನಾನ ಮಾಡಿ ದೇವರ ಪೂಜೆ, ಜಲಾಭಿಷೇಕ ಹಾಗೂ ಮಂತ್ರಜಪ ಮಾಡುವ ಪದ್ಧತಿಯಿದೆ. 'ಓಂ ನಮಃ ಶಿವಾಯ' ಜಪ, ಧ್ಯಾನ ಮತ್ತು ಸಾತ್ವಿಕ ಚಿಂತನೆ ಮನಸ್ಸಿಗೆ ನೆಮ್ಮದಿ ನೀಡುತ್ತದೆ ಎಂಬ ನಂಬಿಕೆಯೂ ಇದೆ. ಕೋಪ, ಅಹಂಕಾರ ಹಾಗೂ ನಕಾರಾತ್ಮಕ ಆಲೋಚನೆಗಳನ್ನು ದೂರವಿಟ್ಟು ದಯೆ, ಸೇವೆ ಮತ್ತು ಸೌಹಾರ್ದ ಬೆಳೆಸಿಕೊಳ್ಳುವುದು ಶ್ರಾವಣದ ಆಚರಣೆಯ ಮುಖ್ಯ ಸಂದೇಶವಾಗಿದೆ.

ಒಟ್ಟಿನಲ್ಲಿ, ಶ್ರಾವಣ ಮಾಸವು ಕೇವಲ ಧಾರ್ಮಿಕ ಆಚರಣೆಗಳ ಅವಧಿಯಲ್ಲ; ಭಕ್ತಿ, ಸಂಯಮ, ಸೇವೆ, ಉತ್ತಮ ಆಹಾರ ಪದ್ಧತಿ ಹಾಗೂ ಮನಸ್ಸಿನ ಶಾಂತಿಗೆ ಒತ್ತು ನೀಡುವ ಕಾಲವಾಗಿದೆ. ಧಾರ್ಮಿಕ ನಂಬಿಕೆಗಳೊಂದಿಗೆ ಆರೋಗ್ಯಕರ ಜೀವನಶೈಲಿಯನ್ನೂ ಅಳವಡಿಸಿಕೊಳ್ಳುವ ಮೂಲಕ ಶ್ರಾವಣ ಮಾಸವನ್ನು ಅರ್ಥಪೂರ್ಣವಾಗಿ ಆಚರಿಸಬಹುದು.



೮೦ ನೇ ಸಾತಂತ್ರ್ಯ ದಿನಾಚರಣೆ ಅಂಗವಾಗಿ ಸಿಎಂ ಡಿ ಕೆ ಶಿವಕುಮಾರ್ ಅವರು ಕ್ವೀನ್ಸ್ ರಸ್ತೆಯ ಕೆಪಿಸಿಸಿ ಕಚೇರಿಯಲ್ಲಿ ಶನಿವಾರ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು. ಕೆಪಿಸಿಸಿ ಅಧ್ಯಕ್ಷ ಬಿ ಕೆ ಹರಿಪ್ರಸಾದ್ ಅವರು ಉಪಸ್ಥಿತರಿದ್ದರು.

# ಭಾರತದ ಸ್ವಾತಂತ್ರ್ಯ ಹೇಗೆ ಬಂದಿತು ಮತ್ತು ಅದರ ಮಹತ್ವ

ಆಗಸ್ಟ್.15,1947ರಂದು ಭಾರತವು ಬ್ರಿಟಿಷ್ ಆಳ್ವಿಕೆಯಿಂದ ಮುಕ್ತವಾಗಿ ಸ್ವತಂತ್ರ ರಾಷ್ಟ್ರವಾಗಿ ಹೊರಹೊಮ್ಮಿತು. ಈ ದಿನವು ಕೇವಲ ಒಂದು ಇತಿಹಾಸದ ಘಟನೆಯಲ್ಲ; ಇದು ಶತಮಾನಗಳ ಹೋರಾಟ, ಬಲಿದಾನ, ಏಕತೆ ಮತ್ತು ಆಶೆಯ ಸಂಕೇತವಾಗಿದೆ. ಈ ಲೇಖನದಲ್ಲಿ ಸ್ವಾತಂತ್ರ್ಯ ಹೇಗೆ ಸಾಧ್ಯವಾಯಿತು ಮತ್ತು ಅದರ ಮಹತ್ವವೇನು ಎಂಬುದನ್ನು ವಿವರವಾಗಿ ಸಾಧ್ಯಮಟ್ಟಿಗೆ ನೀಡಲಾಗಿದೆ, ಬ್ರಿಟಿಷ್ ಆಳ್ವಿಕೆ ಮತ್ತು ಸ್ವಾತಂತ್ರ್ಯ ಹೋರಾಟದ ಹಿನ್ನೆಲೆ, 1757ರ ಪ್ಲಾಸಿ ಕದನದ ನಂತರ ಈಸ್ಟ್ ಇಂಡಿಯಾ ಕಂಪನಿಯು ಭಾರತದಲ್ಲಿ ತನ್ನ ಪ್ರಾಬಲ್ಯವನ್ನು ಹೆಚ್ಚಿಸಿಕೊಂಡಿತು.

1857ರ ಮೊದಲ ಸ್ವಾತಂತ್ರ್ಯ ಸಂಗ್ರಾಮ {ಸಿಪಾಯಿ ದಂಗೆ} ವಿಫಲವಾದ ನಂತರ, 1858ರಲ್ಲಿ ಬ್ರಿಟಿಷ್ ಕ್ರೌನ್ ನೇರವಾಗಿ ಭಾರತವನ್ನು ಆಳಲು ಪ್ರಾರಂಭಿಸಿತು. ಅಂದಿನಿಂದ ಭಾರತೀಯರು ರಾಜಕೀಯ, ಆರ್ಥಿಕ ಮತ್ತು ಸಾಮಾಜಿಕ ಶೋಷಣೆಗೆ ಒಳಗಾದರು. ಕೃಷಿ, ಕೈಗಾರಿಕೆ ಮತ್ತು ಶಿಕ್ಷಣ ಕ್ಷೇತ್ರಗಳಲ್ಲಿ ಬ್ರಿಟಿಷ್ ನೀತಿಗಳು ಭಾರತವನ್ನು ಬಡತನಕ್ಕೆ ತಳ್ಳಿದವು, 19ನೇ ಶತಮಾನದ ಕೊನೆಯಲ್ಲಿ ರಾಷ್ಟ್ರೀಯ ಚೇತನ ಜಾಗೃತವಾಯಿತು. 1885ರಲ್ಲಿ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಸ್ಥಾಪನೆಯಾಯಿತು.

ಮೊದಲು ಮಧ್ಯಮಮಾರ್ಗದ ಬೇಡಿಕೆಗಳನ್ನು ಮುಂದಿಟ್ಟಿದ್ದ ಕಾಂಗ್ರೆಸ್, ಕಾಲಕ್ರಮೇಣ ಸಂಪೂರ್ಣ ಸ್ವರಾಜ್ಯದ ಬೇಡಿಕೆಯತ್ತ ಸಾಗಿತು. ಬಾಲ ಗಂಗಾಧರ ತಿಲಕ್, ಲಾಲಾ ಲಜಪತ್ ರಾಯ್, ಬಿಪಿನ್ ಚಂದ್ರ ಪಾಲ್{ಲಾಲ್-ಬಾಲ್-ಪಾಲ್}. ಮುಂತಾದವರು ಉಗ್ರವಾದಿ ಮಾರ್ಗವನ್ನುಅನುಸರಿಸಿದರು."ಸ್ವರಾಜ್ಯ ನನ್ನ ಜನ್ಮಸಿದ್ಧ ಹಕ್ಕು"ಎಂದು ತಿಲಕ್ ಘೋಷಿಸಿದರು,

ಮಹಾತ್ಮಾಗಾಂಧಿ ಮತ್ತು ಅಹಿಂಸಾ ಹೋರಾಟ, 1915ರಲ್ಲಿ ದಕ್ಷಿಣ ಆಫ್ರಿಕಾದಿಂದ ಹಿಂದಿರುಗಿದ ಮೋಹನ್‌ದಾಸ್ ಕರಮಚಂದ್ ಗಾಂಧಿ, ಅಹಿಂಸೆ ಮತ್ತು ಸತ್ಯಾಗ್ರಹದ ಮೂಲಕ ಹೋರಾಟವನ್ನು ರೂಪಾಂತರಗೊಳಿಸಿದರು. 1919ರ ಜಾಲಿಯನ್‌ವಾಲಾ ಬಾಗ್ ಹತ್ಯಾಕಾಂಡವು ಜನರನ್ನು ಜಾಗೃತಗೊಳಿಸಿತು, 1920-22ರಅಸಹಕಾರ ಚಳವಳಿ,1930.ರ ಉಪ್ಪಿನ ಸತ್ಯಾಗ್ರಹ ಡಾಂಡಿಯಾತ್ರೆ, ಮತ್ತು 1942ರ "ಕ್ವಿಟ್ ಇಂಡಿಯಾ" ಚಳವಳಿ ಇವು ಮುಖ್ಯ ಹಂತಗಳು "ಡು ಆರ್ ಡೈ" ಎಂಬ ಸುಭಾಷ್ ಚಂದ್ರ ಬೋಸ್ ರವರ ಕರೆ ದೇಶಾದ್ಯಂತ ಜನರನ್ನು ಬೀದಿಗೆ ಇಳಿಸಿತು, ಸುಭಾಷ್ ಚಂದ್ರಬೋಸ್ ಅವರು ಭಾರತೀಯ ರಾಷ್ಟ್ರೀಯ ಸೇನೆಯನ್ನು ರಚಿಸಿ "ಜೈಹಿಂದ್" ಘೋಷ ವಾಕ್ಯದೊಂದಿಗೆ ಸಶಸ್ತ್ರ ಹೋರಾಟವನ್ನು ನಡೆಸಿದರು. ಭಗತ್ ಸಿಂಗ್, ಚಂದ್ರಶೇಖರ್ ಆಜಾದ್, ರಾಮ್ ಪ್ರಸಾದ್ ಬಿಸ್ಮಿಲ್ ಮುಂತಾದ ಕ್ರಾಂತಿಕಾರಿಗಳು ತಮ್ಮ ಪ್ರಾಣವನ್ನೇ ಅರ್ಪಿಸಿದರು.

ರಾಣಿ ಲಕ್ಷ್ಮೀಬಾಯಿ, ಝೂನ್ಸಿ, ಟಿಪ್ಪು ಸುಲ್ತಾನ್ ಮುಂತಾದವರ ಹೋರಾಟಗಳು ಹಿಂದಿನಿಂದಲೂ ಸ್ಫೂರ್ತಿ ನೀಡುತ್ತಿದ್ದವು, ಸ್ವಾತಂತ್ರ್ಯದ ನೇರ ಕಾರಣಗಳು, ಎರಡನೇ ವಿಶ್ವಯುದ್ಧದ ನಂತರ ಬ್ರಿಟನ್ ಆರ್ಥಿಕವಾಗಿ ದುರ್ಬಲಗೊಂಡಿತ್ತು. ಭಾರತೀಯ ಸೈನಿಕರು ಯುದ್ಧದಲ್ಲಿ ಪಾಲ್ಗೊಂಡಿದ್ದರೂ, ದೇಶದಲ್ಲಿ ಬ್ರಿಟಿಷ್ ವಿರೋಧ ತೀವ್ರವಾಗಿತ್ತು 1946ರಲ್ಲಿ ನೌಕಾದಂಗೆ ಮತ್ತು ಕಾರ್ಮಿಕರ ಮುಷ್ಕರಗಳು ಬ್ರಿಟನ್ ಆಡಳಿತವನ್ನು ಅಸ್ಥಿರಗೊಳಿಸಿದವು.

ಕ್ಲೆಮೆಂಟ್ ಅಟ್ಲೀ ನೇತೃತ್ವದ ಲೇಬರ್ ಸರ್ಕಾರವು ಭಾರತಕ್ಕೆ ಸ್ವಾತಂತ್ರ್ಯ ನೀಡುವ ನಿರ್ಧಾರ ತೆಗೆದುಕೊಂಡಿತು, ಲಾರ್ಡ್ ಮೌಂಟ್‌ಬ್ಯಾಟನ್ ಅವರನ್ನು ವೈಸ್‌ರಾಯ್ ಆಗಿ ಕಳುಹಿಸಲಾಯಿತು. ಮುಸ್ಲಿಂ ಲೀಗ್‌ನ ಮೊಹಮ್ಮದ್ ಅಲಿ ಜಿನ್ನಾ ಅವರು ಪಾಕಿಸ್ತಾನದ ಬೇಡಿಕೆಯನ್ನು ಮುಂದಿಟ್ಟಿದ್ದರು.

ಅಂತಿಮವಾಗಿ ಜೂನ್ 3,1947ರ ಮೌಂಟ್‌ಬ್ಯಾಟನ್ ಯೋಜನೆಯ ಪ್ರಕಾರ ಭಾರತವನ್ನು ಎರಡು ಭಾಗಗಳಾಗಿ ವಿಭಜಿಸಲಾಯಿತು=ಭಾರತ ಮತ್ತು ಪಾಕಿಸ್ತಾನ ಆಗಸ್ಟ್ 14ರಂದು ಪಾಕಿಸ್ತಾನ ಮತ್ತು ಆಗಸ್ಟ್ 15ರಂದು ಭಾರತ ಸ್ವತಂತ್ರವಾಯಿತು, ಆಗಸ್ಟ್ 14-15ರ ಮಧ್ಯರಾತ್ರಿಯಲ್ಲಿ ಜವಾಹರಲಾಲ್ ನೆಹರು ಅವರು "ತ್ರಸ್ತ್ ವಿತ್ ಡೆಸ್ಟಿನಿ" ಎಂಬ ಐತಿಹಾಸಿಕ ಭಾಷಣ ಮಾಡಿದರು.

"ಇಂದು ನಾವು ನಿದ್ದೆಯಿಂದ ಎದ್ದು, ಸ್ವಾತಂತ್ರ್ಯದ ಜೀವಂತ ಜಗತ್ತಿನಲ್ಲಿ ಪ್ರವೇಶಿಸುತ್ತಿದ್ದೇವೆ" ಎಂದು ಅವರು ಹೇಳಿದರು. ರಾಷ್ಟ್ರಪತಿ ಭವನದಲ್ಲಿ ಭಾರತದ ತ್ರಿವರ್ಣ ಧ್ವಜವನ್ನು ಹಾರಿಸಲಾಯಿತು. ರಾಜೇಂದ್ರ ಪ್ರಸಾದ್ ಅವರು ಮೊದಲ ರಾಷ್ಟ್ರಪತಿಯಾಗಿ, ನೆಹರು ಪ್ರಧಾನಮಂತ್ರಿಯಾಗಿ ಪದಗ್ರಹಣ ಮಾಡಿದರು, ವಿಭಜನೆಯಿಂದ ಲಕ್ಷಾಂತರ ಜನರು ಸ್ಥಳಾಂತರಗೊಂಡರು. ಹಿಂಸಾಚಾರ ಮತ್ತು ರಕ್ತಪಾತ ನಡೆಯಿತು. ಆದರೂ, ಭಾರತವು ಪ್ರಜಾಸತ್ತಾತ್ಮಕ, ಜಾತ್ಯಾತೀತ ರಾಷ್ಟ್ರವಾಗಿ ಹೊರಹೊಮ್ಮಿತು. ಜೈ ಹಿಂದ್ ಎಲ್ಲಾರಿಗೂ 80 ನೇ ಸ್ವಾತಂತ್ರ್ಯ ದಿನಾಚರಣೆಯ ಹಾರ್ದಿಕ ಶುಭಾಶಯಗಳು.

ಎಲ್. ವಿವೇಕಾನಂದ

## ಸ್ವಾತಂತ್ರ್ಯದ ಮೌಲ್ಯ ಮತ್ತು ಹೊಣೆಗಾರಿಕೆ

- ರಾಷ್ಟ್ರೀಯ ಏಕತೆಯ ಸಂಕೇತ:- ವಿಭಿನ್ನ ಭಾಷೆ, ಧರ್ಮ, ಜಾತಿ ಮತ್ತು ಸಂಸ್ಕೃತಿಯ ಜನರು ಒಂದೇ ಧ್ವಜದಡಿ ನಿಂತರು. ಸ್ವಾತಂತ್ರ್ಯ ಹೋರಾಟವು ಭಾರತೀಯರನ್ನು ಒಂದುಗೂಡಿಸಿತು.
- ಪ್ರಜಾಸತ್ತೆ ಮತ್ತು ಸಂವಿಧಾನ:- 1950ರ ಜನವರಿ 26ರಂದು ಸಂವಿಧಾನ ಜಾರಿಗೆ ಬಂದು ಭಾರತ ಗಣರಾಜ್ಯವಾಯಿತು. ಸ್ವಾತಂತ್ರ್ಯದಿಂದಲೇ ಪ್ರಾರಂಭವಾದ ಪ್ರಜಾಸತ್ತಾತ್ಮಕ ಪ್ರಯಾಣ ಮುಂದುವರಿಯುತ್ತಿದೆ,
- ಸ್ವಾಭಿಮಾನ ಮತ್ತು ಸ್ವಯಂ ನಿರ್ಧಾರ:- ವಿದೇಶಿ ಆಳ್ವಿಕೆಯಿಂದ ಮುಕ್ತವಾಗಿ ನಮ್ಮ ಭವಿಷ್ಯವನ್ನು ನಾವೇ ನಿರ್ಧರಿಸುವ ಹಕ್ಕು ಸಿಕ್ಕಿತು.
- ಬಲಿದಾನಿಗಳ ಸ್ಮರಣೆ:- ಲಕ್ಷಾಂತರ ಹೋರಾಟಗಾರರು, ಕ್ರಾಂತಿಕಾರಿಗಳು ಮತ್ತು ಸಾಮಾನ್ಯ ಜನರು ತಮ್ಮ ಪ್ರಾಣವನ್ನು ಅರ್ಪಿಸಿದ್ದಾರೆ. ಅವರ ನೆನಪು ಈ ದಿನದ ಮಹತ್ವವನ್ನು ಹೆಚ್ಚಿಸುತ್ತದೆ.
- ಆಧುನಿಕ ಭಾರತದ ಪ್ರೇರಣೆ:- ಸ್ವಾತಂತ್ರ್ಯದ ನಂತರ ಭಾರತವುವಿಜ್ಞಾನ, ತಂತ್ರಜ್ಞಾನ, ಬಾಹ್ಯಾಕಾಶ, ಕೃಷಿ ಮತ್ತು ಆರ್ಥಿಕ ಕ್ಷೇತ್ರಗಳಲ್ಲಿ ಮಹತ್ತರ ಪ್ರಗತಿ ಸಾಧಿಸಿದೆ, ಆದರೆ ಬಡತನ-ಅಸಮಾನತೆ-ಭ್ರಷ್ಟಾಚಾರ. ಮುಂತಾದ ಸವಾಲುಗಳು ಇನ್ನೂ ಉಳಿದಿವೆ. ಸ್ವಾತಂತ್ರ್ಯದ ನಿಜವಾದ ಅರ್ಥವನ್ನು ಸಾಧಿಸಲು ನಾವು ಇನ್ನಷ್ಟು ಶ್ರಮಿಸಬೇಕಾಗಿದೆ.

## ಇಂದಿನ ಸಂಭ್ರಮ ಮತ್ತು ಹೊಣೆಗಾರಿಕೆ

ಪ್ರತಿ ವರ್ಷ ಆಗಸ್ಟ್ 15ರಂದು ರಾಷ್ಟ್ರಪತಿ ಭವನದಲ್ಲಿ ಧ್ವಜಾರೋಹಣ, ಪ್ರಧಾನಮಂತ್ರಿಯವರ ಭಾಷಣ, ಪೆರೇಡ್ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯುತ್ತವೆ. ಶಾಲೆಗಳು, ಕಚೇರಿಗಳು ಮತ್ತು ಮನೆಗಳಲ್ಲಿ ಧ್ವಜ ಹಾರಿಸಲಾಗುತ್ತದೆ. ರಾಷ್ಟ್ರಗೀತೆ ಹಾಡಲಾಗುತ್ತದೆ, ಆದರೆ ಸ್ವಾತಂತ್ರ್ಯ ಕೇವಲ ಒಂದು ದಿನದ ಸಂಭ್ರಮವಲ್ಲ. ಅದು ಪ್ರತಿ ನಾಗರಿಕನ ಹಕ್ಕುಗಳನ್ನು ಕಾಪಾಡುವುದು, ಜಾತ್ಯಾತೀತತೆಯನ್ನು ಎತ್ತಿಹಿಡಿಯುವುದು, ದೇಶದ ಅಭಿವೃದ್ಧಿಗೆ ಕೊಡುಗೆ ನೀಡುವುದು ಮತ್ತು ಪ್ರಜಾಸತ್ತೆಯನ್ನು ಬಲಪಡಿಸುವುದು. ಗಾಂಧಿಯವರು ಹೇಳಿದಂತೆ, "ನಿಜವಾದ ಸ್ವರಾಜ್ಯವು ಹೃದಯದಲ್ಲಿರಬೇಕು." ಆಗಸ್ಟ್ 15 ನಮಗೆ ನೆನಪಿಸುತ್ತದೆ, ಸ್ವಾತಂತ್ರ್ಯವನ್ನು ಸುಲಭವಾಗಿ ಪಡೆದಿಲ್ಲ. ಅದನ್ನು ಕಾಪಾಡಿಕೊಳ್ಳುವುದು ಮತ್ತು ಮುಂದಿನ ಪೀಳಿಗೆಗೆ ಹಸ್ತಾಂತರಿಸುವುದು ನಮ್ಮ ಜವಾಬ್ದಾರಿ.



೮೦ ನೇ ಸಾತಂತ್ರ್ಯ ದಿನಾಚರಣೆ ಅಂಗವಾಗಿ ಸಿಎಂ ಡಿ ಕೆ ಶಿವಕುಮಾರ್ ಅವರು ಸದಾಶಿವನಗರ ನಿವಾಸದಲ್ಲಿ ಶನಿವಾರ ಧ್ವಜಾರೋಹಣ ನೆರವೇರಿಸಿದರು. ಪತ್ನಿ ಉಷಾ ಶಿವಕುಮಾರ್ ಅವರು ಉಪಸ್ಥಿತರಿದ್ದರು. ನಂತರ ಮುಖ್ಯಮಂತ್ರಿಗಳು ಮಾಧ್ಯಮದವರ ಜತೆ ಮಾತನಾಡಿದರು.

# ಇಂಧನ, ಮೂಲಸೌಕರ್ಯದಲ್ಲಿ ಭಾರತಕ್ಕೆ ಹೊಸ ಮೈಲಿಗಲ್ಲು

● ವಿಕ್ರಮ ವಾಹಿನಿ | ದೆಹಲಿ

ದೇಶದ ಇಂಧನ ಮತ್ತು ಮೂಲಸೌಕರ್ಯ ಕ್ಷೇತ್ರದಲ್ಲಿ ಕಳೆದ ಒಂದು ದಶಕದಲ್ಲಿ ಮಹತ್ವದ ಪ್ರಗತಿ ಸಾಧಿಸಲಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು. ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಕೆಂಪುಕೋಟೆಯಿಂದ ದೇಶವನ್ನುದ್ದೇಶಿಸಿ ಮಾತನಾಡಿದ ಅವರು, ಇಂಧನ ಭದ್ರತೆ, ಸೌರಶಕ್ತಿ, ರೈಲ್ವೆ ವಿದ್ಯುದೀಕರಣ ಹಾಗೂ ಪೈಪ್ ಗ್ಯಾಸ್ ವಿಸ್ತರಣೆಯಲ್ಲಿ ಭಾರತ ಸಾಧಿಸಿರುವ ಬೆಳವಣಿಗೆಯನ್ನು ವಿವರಿಸಿದರು.

**700 ನಗರಗಳಿಗೆ ಪೈಪ್ ಗ್ಯಾಸ್:** 2014ಕ್ಕೂ ಮೊದಲು ದೇಶದ ಕೇವಲ 70 ನಗರಗಳಿಗೆ ಮಾತ್ರ ಪೈಪ್ ಗ್ಯಾಸ್ ವ್ಯವಸ್ಥೆ ಲಭ್ಯವಿತ್ತು. ಇದೀಗ ಈ ಸೇವೆಯನ್ನು 700 ನಗರಗಳಿಗೆ ವಿಸ್ತರಿಸಲಾಗಿದೆ ಎಂದು ಪ್ರಧಾನಿ ತಿಳಿಸಿದರು. ಪೈಪ್ ಗ್ಯಾಸ್ ಸಂಪರ್ಕ ಹೊಂದಿರುವ ಮನೆಗಳ ಸಂಖ್ಯೆಯೂ 20-22 ಲಕ್ಷದಿಂದ 1.75 ಕೋಟಿಗೆ ಏರಿಕೆಯಾಗಿದೆ ಎಂದರು.

ದೇಶದ ಸೌರಶಕ್ತಿ ಉತ್ಪಾದನಾ ಸಾಮರ್ಥ್ಯದಲ್ಲಿ ಗಣನೀಯ ಏರಿಕೆಯಾಗಿದೆ. 2014ರಲ್ಲಿ ಕೇವಲ 2 ಗಿಗಾವ್ಯಾಟ್‌ನಷ್ಟಿದ್ದ ಸೌರಶಕ್ತಿ ಸಾಮರ್ಥ್ಯ ಇದೀಗ 160 ಗಿಗಾವ್ಯಾಟ್‌ಗೆ ತಲುಪಿದೆ ಎಂದು ಮೋದಿ ಹೇಳಿದರು. ಪಿಎಂ ಸೂರ್ಯ ಘರ್ ಉಚಿತ ವಿದ್ಯುತ್ ಯೋಜನೆಯಡಿ 50 ಲಕ್ಷಕ್ಕೂ ಹೆಚ್ಚು ಮನೆಗಳು ಸೌರಶಕ್ತಿ ಅಳವಡಿಸಿಕೊಂಡಿದ್ದು, ಇದರಿಂದ ಹಲವು ಕುಟುಂಬಗಳ ವಿದ್ಯುತ್ ಬಿಲ್ ಶೂನ್ಯವಾಗುತ್ತಿದೆ ಎಂದರು.

**ರೈಲ್ವೆ ವಿದ್ಯುದೀಕರಣಕ್ಕೆ ವೇಗ:** ರೈಲ್ವೆ ವಿದ್ಯುದೀಕರಣ ಕ್ಷೇತ್ರದಲ್ಲೂ ಭಾರತ ದೊಡ್ಡ ಹೆಜ್ಜೆ ಇಟ್ಟಿದೆ. ರೈಲ್ವೆ ಆರಂಭವಾದ ಸುಮಾರು 90 ವರ್ಷಗಳಲ್ಲಿ ಶೇ.30ರಷ್ಟು ಮಾರ್ಗ ಮಾತ್ರ ವಿದ್ಯುದೀಕರಣಗೊಂಡಿತ್ತು. ಆದರೆ ಕಳೆದ 10 ವರ್ಷಗಳಲ್ಲಿ ಶೇ.70ರಷ್ಟು ರೈಲ್ವೆ ಮಾರ್ಗಗಳನ್ನು ವಿದ್ಯುದೀಕರಿಸಿ, ದೇಶವು ಸಂಪೂರ್ಣ ರೈಲ್ವೆ ವಿದ್ಯುದೀಕರಣದ ಗುರಿ ಸಾಧಿಸಿದೆ ಎಂದು ಪ್ರಧಾನಿ ಹೇಳಿದರು.

**ಹೈಡ್ರೋಜನ್ ರೈಲಿನತ್ತ ಹೆಜ್ಜೆ:** ಭವಿಷ್ಯದ ಸ್ವಚ್ಛ ಇಂಧನ ಕ್ಷೇತ್ರದಲ್ಲಿ ಭಾರತ ಹೊಸ ಹೆಜ್ಜೆ ಇಡುತ್ತಿದೆ. ದೇಶದ ಮೊದಲ ಹೈಡ್ರೋಜನ್ ಚಾಲಿತ ರೈಲು ಆರಂಭಿಸುವ ಮೂಲಕ ಪರ್ಯಾಯ ಇಂಧನ ಬಳಕೆಗೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ ಎಂದು ಮೋದಿ ತಿಳಿಸಿದರು. ಹಸಿರು ಇಂಧನದ ಬಳಕೆ ಹೆಚ್ಚಿಸುವ ಮೂಲಕ ಪರಿಸರ ಸಂರಕ್ಷಣೆಯ ಜೊತೆಗೆ ಇಂಧನ ಸ್ವಾವಲಂಬನೆ ಸಾಧಿಸುವ ಗುರಿಯನ್ನು ಸರ್ಕಾರ ಹೊಂದಿದೆ ಎಂದರು.

ಕೋವಿಡ್ ಸಾಂಕ್ರಾಮಿಕ, ಜಾಗತಿಕ ಸಂಘರ್ಷಗಳು ಹಾಗೂ ಇತರ ಸವಾಲುಗಳ ನಡುವೆಯೂ ಭಾರತದ ಅಭಿವೃದ್ಧಿಯ ವೇಗ ಕುಂಠಿತವಾಗಿಲ್ಲ. ಇಂಧನ ಭದ್ರತೆ ಮತ್ತು ಆಧುನಿಕ ಮೂಲಸೌಕರ್ಯಗಳ ಮೂಲಕ ಅಭಿವೃದ್ಧಿ ಹೊಂದಿದ ಭಾರತದ ಗುರಿಯತ್ತ ದೇಶ ಮುನ್ನಡೆಯುತ್ತಿದೆ ಎಂದು ಪ್ರಧಾನಿ ವಿಶ್ವಾಸ ವ್ಯಕ್ತಪಡಿಸಿದರು.


# ಭಾರತದ ಅಭಿವೃದ್ಧಿಗೆ ಮೋದಿ 7 ಶಕ್ತಿಧಾರೆ

● ವಿಕ್ರಮ ವಾಹಿನಿ | ನವದೆಹಲಿ

2047ರ ವೇಳೆಗೆ ಭಾರತವನ್ನು ಅಭಿವೃದ್ಧಿ ಹೊಂದಿದ ಹಾಗೂ ಜಾಗತಿಕವಾಗಿ ಮುಂಚೂಣಿ ರಾಷ್ಟ್ರವನ್ನಾಗಿ ರೂಪಿಸುವ ಗುರಿಯೊಂದಿಗೆ ಪ್ರಧಾನಿ ನರೇಂದ್ರ ಮೋದಿ ಅವರು 'ಸಪ್ತ ಸಿಂಧು' ಪರಿಕಲ್ಪನೆಯನ್ನು ದೇಶದ ಮುಂದಿಟ್ಟಿದ್ದಾರೆ.

80ನೇ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ಕೆಂಪುಕೋಟೆಯಿಂದ ರಾಷ್ಟ್ರವನ್ನುದ್ದೇಶಿಸಿ ಮಾತನಾಡಿದ ಮೋದಿ, ಭಾರತದ ಯುವಶಕ್ತಿಯನ್ನು ದೇಶದ ಅಭಿವೃದ್ಧಿಯೊಂದಿಗೆ ಜೋಡಿಸಿ, ಏಳು ಪ್ರಮುಖ ಕ್ಷೇತ್ರಗಳನ್ನು ಸಮಗ್ರವಾಗಿ ಬೆಳೆಸುವ ಅಗತ್ಯವನ್ನು ಒತ್ತಿ ಹೇಳಿದರು.

ಪ್ರಧಾನಿ ಪ್ರಸ್ತಾಪಿಸಿದ ಏಳು ಪ್ರಮುಖ ಕ್ಷೇತ್ರಗಳೆಂದರೆ ಉತ್ಪಾದನೆ, ಕೃಷಿ, ತಂತ್ರಜ್ಞಾನ, ಮೂಲಸೌಕರ್ಯ, ರಕ್ಷಣಾ ಕ್ಷೇತ್ರ, ಹಸಿರು ಮತ್ತು ನೀಲಿ ಆರ್ಥಿಕತೆ ಹಾಗೂ ಸಾಫ್ಟ್ ಪವರ್. ಈ ಕ್ಷೇತ್ರಗಳನ್ನು ಪ್ರತ್ಯೇಕವಾಗಿ ನೋಡುವ ಬದಲು ಪರಸ್ಪರ ಸಂಪರ್ಕ ಹೊಂದಿರುವ ಶಕ್ತಿಗಳಾಗಿ ಅಭಿವೃದ್ಧಿಪಡಿಸಬೇಕು ಎಂದು ಹೇಳಿದರು.



ಉತ್ಪಾದನಾ ಕ್ಷೇತ್ರಕ್ಕೆ ವಿಶೇಷ ಒತ್ತು ನೀಡಿದ ಮೋದಿ, ಜಾಗತಿಕ ಪೂರೈಕೆ ಸರಪಳಿಯಲ್ಲಿ ಭಾರತ ವಿಶ್ವಾಸಾರ್ಹ ಕೇಂದ್ರವಾಗಿ ಹೊರಹೊಮ್ಮಬೇಕು ಎಂದರು. ಭಾರತೀಯ ಉತ್ಪನ್ನಗಳು ಗುಣಮಟ್ಟ, ವೆಚ್ಚ ಮತ್ತು ಪ್ರಮಾಣದಲ್ಲಿ ಜಾಗತಿಕವಾಗಿ ಸ್ಪರ್ಧಿಸುವಂತಿರಬೇಕು. 'ಶೂನ್ಯ ದೋಷ, ನಿಖರ ಉತ್ಪಾದನೆ' ಭಾರತದ ಗುರುತಾಗಬೇಕು ಎಂದು ಉದ್ಯಮಿಗಳು ಮತ್ತು ಸಣ್ಣ, ಮಧ್ಯಮ ಕೈಗಾರಿಕೆಗಳಿಗೆ ಕರೆ ನೀಡಿದರು.

ಪ್ರತಿ ಉತ್ಪಾದಕ ಹಾಗೂ ಎಂಎಸ್‌ಎಂಇ ಸಂಸ್ಥೆಯೂ ಜಾಗತಿಕ ಮಾರುಕಟ್ಟೆಯಲ್ಲಿ ತನ್ನದೇ ಆದ ವಿಶ್ವಾಸಾರ್ಹ ಬ್ರ್ಯಾಂಡ್ ನಿರ್ಮಿಸಬೇಕು ಎಂದು ಸಲಹೆ ನೀಡಿದರು.

ಸ್ವಾತಂತ್ರ್ಯದ 100ನೇ ವರ್ಷವಾದ 2047ರ ವೇಳೆಗೆ ಭಾರತವನ್ನು ಸಂಪೂರ್ಣ ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ರೂಪಿಸುವುದು ದೇಶದ ಮಹತ್ವಾಕಾಂಕ್ಷೆಯ ಗುರಿಯಾಗಿದೆ ಎಂದು ಮೋದಿ ಹೇಳಿದರು. 140 ಕೋಟಿ ಭಾರತೀಯರು ಒಗ್ಗಟ್ಟಿನಿಂದ ದುಡಿದರೆ ಈ ಗುರಿ ಸಾಧಿಸಲು ಸಾಧ್ಯ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ದೊಡ್ಡ ಕನಸುಗಳನ್ನು ಕಾಣುವ ಮೂಲಕವೇ ದೇಶದ ಚಿಂತನೆ ಮತ್ತು ದೃಷ್ಟಿಕೋನ ವಿಸ್ತರಿಸುತ್ತದೆ. ದೃಢ ಸಂಕಲ್ಪದೊಂದಿಗೆ ಮುನ್ನಡೆದರೆ ಕಷ್ಟಗಳು ಹಾಗೂ ಸವಾಲುಗಳ ನಡುವೆಯೂ ಗುರಿ ತಲುಪಲು ಸಾಧ್ಯ ಎಂದು ಅವರು ಹೇಳಿದರು.

## 1 ಕೋಟಿ ಯುವಜನರಿಗೆ ಎಐ ತರಬೇತಿ: ಮೋದಿ ಘೋಷಣೆ

● ವಿಕ್ರಮ ವಾಹಿನಿ | ನವದೆಹಲಿ

ದೇಶದ ಯುವಜನರನ್ನು ಭವಿಷ್ಯದ ತಂತ್ರಜ್ಞಾನಕ್ಕೆ ಸಜ್ಜುಗೊಳಿಸುವ ಮಹತ್ವದ ಹೆಜ್ಜೆಯಾಗಿ ಪ್ರಧಾನಿ ನರೇಂದ್ರ ಮೋದಿ ಅವರು ಮುಂದಿನ ಒಂದು ವರ್ಷದಲ್ಲಿ 1 ಕೋಟಿ ಯುವಜನರಿಗೆ ಕೃತಕ ಬುದ್ಧಿಮತ್ತೆ (ಎಐ) ತರಬೇತಿ ನೀಡುವ ಮಹತ್ವಾಕಾಂಕ್ಷೆಯ ಯೋಜನೆಯನ್ನು ಘೋಷಿಸಿದರು.

ಕೆಂಪುಕೋಟೆಯಲ್ಲಿ 80ನೇ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ಧ್ವಜಾರೋಹಣ ನೆರವೇರಿಸಿ ರಾಷ್ಟ್ರವನ್ನುದ್ದೇಶಿಸಿ ಮಾತನಾಡಿದ ಮೋದಿ, ಭಾರತದ ಅಭಿವೃದ್ಧಿಯ ಪಯಣದಲ್ಲಿ ಯುವಶಕ್ತಿಯನ್ನು ಕೇಂದ್ರಬಿಂದುವಾಗಿ ಪರಿಗಣಿಸುವುದಾಗಿ ಹೇಳಿದರು. ಯುವಕರು, ಮಹಿಳೆಯರು, ರೈತರು ಹಾಗೂ ಕಾರ್ಮಿಕರ ಸಹಕಾರದಿಂದ 2047ರ ವೇಳೆಗೆ 'ವಿಕಸಿತ ಭಾರತ'ದ ಗುರಿ ಸಾಧಿಸಬಹುದು ಎಂಬ ವಿಶ್ವಾಸ ವ್ಯಕ್ತಪಡಿಸಿದರು.

'ನನ್ನ ದೇಶದ ಯುವಜನರ ಮೇಲೆ ಸಂಪೂರ್ಣ ನಂಬಿಕೆಯಿದೆ. ಭಾರತದ ದೊಡ್ಡ ಕನಸುಗಳನ್ನು ನನಸಾಗಿಸುವ ಶಕ್ತಿ ಯುವಜನರಲ್ಲಿದೆ' ಎಂದು ಮೋದಿ ಹೇಳಿದರು. ದೇಶದ ಅಭಿವೃದ್ಧಿಯ ವೇಗ ಹೆಚ್ಚಿಸಲು ಸುಧಾರಣೆಗಳ ಪ್ರಕ್ರಿಯೆಯನ್ನು ಮತ್ತಷ್ಟು ತ್ವರಿತಗೊಳಿಸುವ ಅಗತ್ಯವಿದೆ ಎಂದು ಅವರು ಪ್ರತಿಪಾದಿಸಿದರು.

ಈ ಬಾರಿಯ ಸ್ವಾತಂತ್ರ್ಯೋತ್ಸವದಲ್ಲಿ 'ವಂದೇ ಮಾತರಂ' ಗೀತೆಗೆ ವಿಶೇಷ ಸ್ಥಾನ ನೀಡಲಾಯಿತು. ಗೀತೆಯ 150ನೇ ವರ್ಷಾಚರಣೆಯ ಹಿನ್ನೆಲೆಯಲ್ಲಿ ಕೆಂಪುಕೋಟೆ ಕಾರ್ಯಕ್ರಮದಲ್ಲಿ ಸೇನಾ ಬ್ಯಾಂಡ್ 'ವಂದೇ ಮಾತರಂ' ನುಡಿಸಿತು. ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಗಣ್ಯರು ಹಾಗೂ ಸಾರ್ವಜನಿಕರು ಗೀತೆಯನ್ನು ಹಾಡಿದರು. ಬಳಿಕ ರಾಷ್ಟ್ರಗೀತೆ ಮೊಳಗಿತು.

ಸ್ವಾತಂತ್ರ್ಯೋತ್ಸವ ಕಾರ್ಯಕ್ರಮದಲ್ಲಿ ಈ ಬಾರಿ ಹೆಚ್ಚಿನ ಸಂಖ್ಯೆಯಲ್ಲಿ ಯುವಜನರು ಭಾಗವಹಿಸಿದ್ದರು. ಸೇನೆ, ನೌಕಾಪಡೆ ಮತ್ತು ವಾಯುಪಡೆಯ ಸುಮಾರು 2,500 ಬಾಲಕ-ಬಾಲಕಿಯರ ಕ್ಯಾಡೆಟ್‌ಗಳು ಹಾಗೂ 'ಮೈ ಭಾರತ್' ಸ್ವಯಂಸೇವಕರು ಪಾಲ್ಗೊಂಡರು. ಜ್ಞಾನಪಥದಲ್ಲಿ ಕುಳಿತು 'ವಂದೇ ಮಾತರಂ' ಪದದ ಆಕಾರ ರೂಪಿಸುವ ಮೂಲಕ ಅವರು ಗಮನ ಸೆಳೆದರು.

## ಮಹಿಳಾ ಮೀಸಲಾತಿಗೆ ಪಕ್ಷಭೇದ ಬೇಡ

ಲೋಕಸಭೆ ಹಾಗೂ ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿ ಕಲ್ಪಿಸುವ 'ನಾರಿ ಶಕ್ತಿ ವಂದನ್ ಅಧಿನಿಯಮ' ಜಾರಿಗೆ ಎಲ್ಲ ರಾಜಕೀಯ ಪಕ್ಷಗಳು ಪಕ್ಷಭೇದ ಮರೆತು ಒಗ್ಗಟ್ಟಿನಿಂದ ಬೆಂಬಲಿಸಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿದರು.

80ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ಕೆಂಪುಕೋಟೆಯಿಂದ ರಾಷ್ಟ್ರವನ್ನುದ್ದೇಶಿಸಿ ಮಾತನಾಡಿದ ಮೋದಿ, ದೇಶದ ರಾಜಕೀಯ ವ್ಯವಸ್ಥೆಯಲ್ಲಿ ಮಹಿಳೆಯರಿಗೆ ಹೆಚ್ಚಿನ ಪ್ರಾತಿನಿಧ್ಯ ದೊರೆಯುವ ಅಗತ್ಯವನ್ನು ಒತ್ತಿ ಹೇಳಿದರು. ಪಂಚಾಯಿತಿಗಳು, ನಗರಸಭೆಗಳು ಹಾಗೂ ಮಹಾನಗರ ಪಾಲಿಕೆಗಳಲ್ಲಿ ಮಹಿಳಾ ಜನಪ್ರತಿನಿಧಿಗಳು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದು, ಸ್ಥಳೀಯ ಸಮಸ್ಯೆಗಳಿಗೆ ಪರಿಣಾಮಕಾರಿ ಪರಿಹಾರ ಕಂಡುಕೊಳ್ಳುತ್ತಿದ್ದಾರೆ ಎಂದರು.

2023ರಲ್ಲಿ ಸಂಸತ್ತು ಅಂಗೀಕರಿಸಿರುವ 'ನಾರಿ ಶಕ್ತಿ ವಂದನ್ ಅಧಿನಿಯಮ'ದ ಮೂಲಕ ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇ.33ರಷ್ಟು ಸ್ಥಾನ ಮೀಸಲಿಡುವ ಉದ್ದೇಶವಿದೆ. ಮಹಿಳಾ ರಾಜಕೀಯ ಸಬಲೀಕರಣವನ್ನು ಸ್ಥಳೀಯ ಸಂಸ್ಥೆಗಳಿಂದ ದೇಶದ ಅತ್ಯುನ್ನತ ಚುನಾಯಿತ ಸಂಸ್ಥೆಗಳವರೆಗೆ ವಿಸ್ತರಿಸುವುದು ಇದರ ಆಶಯವಾಗಿದೆ ಎಂದು ಪ್ರಧಾನಿ ಹೇಳಿದರು.

ಮಹಿಳಾ ಮೀಸಲಾತಿ ವಿಚಾರ ಹಲವು ದಶಕಗಳಿಂದ ರಾಜಕೀಯ ಭಿನ್ನಾಭಿಪ್ರಾಯಗಳ ನಡುವೆ ಸಿಲುಕಿಕೊಂಡಿದೆ. ಇದೀಗ ರಾಜಕೀಯ ಲಾಭ-ನಷ್ಟದ ಲೆಕ್ಕಾಚಾರ ಬದಿಗಿಟ್ಟು, ಮಹಿಳೆಯರ ಸಾಮರ್ಥ್ಯಕ್ಕೆ ಗೌರವ ನೀಡುವ ಮೂಲಕ ಅವರಿಗೆ ಸೂಕ್ತ ಪ್ರಾತಿನಿಧ್ಯ ಕಲ್ಪಿಸಲು ಎಲ್ಲ ಪಕ್ಷಗಳು ಕೈಜೋಡಿಸಬೇಕು ಎಂದು ಮೋದಿ ಮನವಿ ಮಾಡಿದರು.

# ಅಭಿವೃದ್ಧಿಯ ತೇರಿಗೆ ಕೈಜೋಡಿಸಿ: ಡಿಕೆಶಿ

1ನೇ ಪುಟದಿಂದ

"ಯುವ ಕರ್ನಾಟಕ–ನವ ಭಾರತ ನಮ್ಮ ಧ್ಯೇಯವಾಕ್ಯ. ಯುವಜನರ ಭವಿಷ್ಯರೂಪಿಸುವ ಸಲುವಾಗಿ ಹೆಚ್ಚಿನ ಅನುದಾನ ನೀಡಲಾಗುತ್ತಿದೆ. ರಾಜ್ಯದ ಶಾಲೆಗಳಲ್ಲಿ 6ನೇ ತರಗತಿಯಿಂದಲೇ ಎಐ (ಎಐ) ಪರಿಚಯಿಸುವುದರ ಜೊತೆಗೆ ಎಐ ಅಕ್ಷರ ಅಭಿಯಾನ ಮತ್ತು ಕೋಡಿಂಗ್ ಗುರುಕುಲ ಆರಂಭಿಸಲಾಗುತ್ತಿದೆ. ಬೆಂಗಳೂರಿನಲ್ಲಿ ದೇಶದ ಪ್ರಪ್ರಥಮ ಸರ್ಕಾರಿ ಸ್ವಾಮ್ಯದ ಎಐ ವಿಶ್ವವಿದ್ಯಾಲಯ ಸ್ಥಾಪಿಸಲಾಗುವುದು ಹಾಗೂ ಎಐ ಹಬ್ ಗಳನ್ನು ನಿರ್ಮಿಸಲಾಗುವುದು" ಎಂದು ಘೋಷಿಸಿದರು.

"ರಾಜ್ಯದಲ್ಲಿ 10 ಸಾವಿರ ಭಾರತ್ ಜೋಡೋ ಯುವ ಸಂಘಗಳನ್ನು ಸ್ಥಾಪಿಸಲಾಗುತ್ತಿದ್ದು, ಪ್ರತಿ ಸಂಘಕ್ಕೆ 10 ಲಕ್ಷದಂತೆ ವಾರ್ಷಿಕ 1,000 ಕೋಟಿ ಅನುದಾನ ಒದಗಿಸಲಾಗುವುದು. ಯುವನಿಧಿ ಯೋಜನೆಯಡಿ ಸುಮಾರು 4 ಲಕ್ಷ ನಿರುದ್ಯೋಗಿ ಹಾಗೂ ಡಿಪ್ಲೊಮಾ ಪದವೀಧರರಿಗೆ 1,200 ಕೋಟಿ ನೆರವು ನೀಡಲಾಗಿದೆ' ಎಂದು ತಿಳಿಸಿದರು.

**ಜಲ ಭದ್ರತೆಗೆ ಆದ್ಯತೆ; ನವೆಂಬರ್ ವೇಳೆಗೆ ತುಮಕೂರು ಜಿಲ್ಲೆಗೆ ಎತ್ತಿನಹೊಳೆ ನೀರು**

"ನೀರಿಗಿಂತ ಅಮೂಲ್ಯವಾದುದು ಮತ್ತೊಂದಿಲ್ಲ" ಜಲ ಭದ್ರತೆ ಸರ್ಕಾರದ ಮೊದಲ ಆದ್ಯತೆ. ಈ ವರ್ಷ ರೂ 16 ಸಾವಿರ ಕೋಟಿ ಮೊತ್ತದ 112 ಪ್ರಮುಖ ಜಲಸಂಪನ್ಮೂಲ ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ. ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಮೊದಲ ಹಂತ ಪೂರ್ಣಗೊಳ್ಳುತ್ತಿದ್ದು, ನವೆಂಬರ್ ವೇಳೆಗೆ ತುಮಕೂರು ಜಿಲ್ಲೆಗೆ ನೀರು ತಲುಪಲಿದೆ" ಎಂದರು.

**ಮೂಲಸೌಕರ್ಯಕ್ಕೆ ವೇಗ**

"ಕಳೆದ ಒಂದು ವರ್ಷದಲ್ಲಿ 1,663 ಕಿ.ಮೀ. ರಾಜ್ಯ ಹೆದ್ದಾರಿ, 3,000 ಕಿ.ಮೀ. ಪ್ರಮುಖ ಜಿಲ್ಲಾ ರಸ್ತೆಗಳು ಹಾಗೂ 125 ಹೊಸ ಸೇತುವೆಗಳನ್ನು ನಿರ್ಮಿಸಲಾಗಿದೆ. ಪ್ರಗತಿಪಥ ಯೋಜನೆಯಡಿ ರೂ 5,200 ಕೋಟಿ ಹೂಡಿಕೆಯೊಂದಿಗೆ 7,100 ಕಿ.ಮೀ. ಗ್ರಾಮೀಣ ರಸ್ತೆಗಳ ಅಭಿವೃದ್ಧಿ ನಡೆಯುತ್ತಿದೆ. ಬೆಂಗಳೂರು ಅಭಿವೃದ್ಧಿಗೆ ರೂ 1.50 ಲಕ್ಷ ಕೋಟಿ ಮೊತ್ತದ ವಿವಿಧ ಮೂಲಸೌಕರ್ಯ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದ್ದು, ಮೂರನೇ ಹಂತದ ಮೆಟ್ರೋ ಪೂರ್ಣಗೊಂಡ ಬಳಿಕ ಮೆಟ್ರೋ ಮಾರ್ಗ 220 ಕಿ.ಮೀ.ಗೆ ವಿಸ್ತರಣೆಯಾಗಲಿದೆ. ಬೆಂಗಳೂರು ಬಿಸಿನೆಸ್ ಕಾರಿಡಾರ್ ಅಡಿಯಲ್ಲಿ 117 ಕಿ.ಮೀ. ರಿಂಗ್ ರಸ್ತೆಯನ್ನು ರೂ 26 ಸಾವಿರ ಕೋಟಿ ವೆಚ್ಚದಲ್ಲಿ ನಿರ್ಮಿಸುವ ಯೋಜನೆಗೆ ಚಾಲನೆ ನೀಡಲಾಗಿದೆ.

**ಸುರಕ್ಷಿತ ಮತ್ತು ಹಸಿರು ನಗರ ಬೆಂಗಳೂರು; ಏಳು ಪ್ರಮುಖ ಕೆರೆಗಳ ಅಭಿವೃದ್ಧಿ**

"ಉತ್ತಮ ಆಡಳಿತ ಮತ್ತು ಸುರಕ್ಷತೆಗಾಗಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಹಾಗೂ ಐದು ಮಹಾನಗರ ಪಾಲಿಕೆಗಳನ್ನು ರಚಿಸಲಾಗಿದೆ. ಬೆಂಗಳೂರು ಪೊಲೀಸ್ ಕಮಿಷನರೇಟ್ ಅನ್ನು ಐದು ಕಮಿಷನರೇಟ್‌ಗಳಾಗಿ ವಿಂಗಡಿಸುವ ಕ್ರಮ ಕೈಗೊಳ್ಳಲಾಗುತ್ತಿದೆ. ರೌಡಿ ನಿಗ್ರಹ ಪಡೆ ರಚನೆ ಮಾಡಲಾಗುವುದು. ಸಂಚಾರ ದಟ್ಟಣೆ ಮತ್ತು ಪರಿಸರ ಮಾಲಿನ್ಯ ಕಡಿಮೆ ಮಾಡಲು ಐದು ಬೃಹತ್ ಟ್ರೀ ಪಾರ್ಕ್ ಗಳನ್ನು ನಿರ್ಮಿಸಲಾಗುವುದು. ಬೆಂಗಳೂರಿನ ಅಂತರ್ಜಲ ಮರುಪೂರಣ ಹಾಗೂ ಕುಡಿಯುವ ನೀರಿನ ಭದ್ರತೆಗಾಗಿ ಏಳು ಪ್ರಮುಖ ಕೆರೆಗಳಾದ ಹೆಸರುಘಟ್ಟ ಕೆರೆ, ಬೆಟ್ಟದ ಕೋಟೆ ಕೆರೆ, ಹೊಸಕೋಟೆ ಕೆರೆ, ಎಲೆ ಮಲ್ಲಪ್ಪ ಶೆಟ್ಟಿ ಕೆರೆ, ಬನ್ನೇರುಘಟ್ಟ ಕೆರೆ, ಬಾಗಲೂರು, ಬೈರಮಂಗಲ ಕೆರೆಗಳಿಗೆ ಹೊಸ ರೂಪ ನೀಡಿ ಅಭಿವೃದ್ಧಿಪಡಿಸಲಾಗುವುದು" ಎಂದು ನೀರಾವರಿ ಯೋಜನೆಯ ಬಗ್ಗೆ ವಿವರಿಸಿದರು.

**ಹೂಡಿಕೆ–ಕೈಗಾರಿಕೆಗೆ ಕರ್ನಾಟಕವೇ ನಾಯಕ**

"ಕಳೆದ ಮೂರು ವರ್ಷಗಳಲ್ಲಿ ರೂ 134 ಲಕ್ಷ ಕೋಟಿಗೂ ಅಧಿಕ ಮೊತ್ತದ 945 ಹೂಡಿಕೆ ಪ್ರಸ್ತಾವನೆಗಳಿಗೆ ಅನುಮೋದನೆ ನೀಡಲಾಗಿದೆ. ಕಳೆದ ಒಂದು ವರ್ಷದಲ್ಲಿ ರೂ 112 ಲಕ್ಷ ಕೋಟಿ ವಿದೇಶಿ ನೇರ ಹೂಡಿಕೆಯನ್ನು ಆಕರ್ಷಿಸಲಾಗಿದೆ" ಎಂದರು.

"ದೊಡ್ಡಬಳ್ಳಾಪುರದಲ್ಲಿ 'ಅಡ್ವಾನ್ಸ್ಡ್ ಮ್ಯಾನುಫ್ಯಾಕ್ಚರಿಂಗ್ ಕ್ಲಸ್ಟರ್' ಸ್ಥಾಪಿಸಲಾಗುತ್ತಿದ್ದು, ರೂ 20 ಸಾವಿರ ಕೋಟಿ ಹೂಡಿಕೆಗೆ ಬದ್ಧತೆ ವ್ಯಕ್ತವಾಗಿದೆ. ಇದರಿಂದ ಸುಮಾರು ಒಂದು ಲಕ್ಷ ಉದ್ಯೋಗ ಸೃಷ್ಟಿಯಾಗುವ ನಿರೀಕ್ಷೆಯಿದೆ. 'ಬಿಯಾಂಡ್ ಬೆಂಗಳೂರು' ಅಡಿಯಲ್ಲಿ ಕಲಬುರಗಿ, ಬೆಳಗಾವಿ, ಹುಬ್ಬಳ್ಳಿ–ಧಾರವಾಡ, ಮಂಗಳೂರು ಮತ್ತು ಮೈಸೂರಿನಲ್ಲಿ ಐದು ಜಾಗತಿಕ ತಂತ್ರಜ್ಞಾನ ಕೇಂದ್ರಗಳನ್ನು ಸ್ಥಾಪಿಸಲಾಗುವುದು" ಎಂದರು.

**ಒಂದು ಲಕ್ಷ ಹೊಸ ಉದ್ಯೋಗ ಸೃಷ್ಟಿ ಗುರಿ**

"ಉದ್ಯೋಗಾಕಾಂಕ್ಷಿಗಳಿಗಾಗಿ 'ಮುಖ್ಯಮಂತ್ರಿ ಉದ್ಯೋಗ ಸಂಕಲ್ಪ' ಯೋಜನೆ ಆರಂಭಿಸಲಾಗುತ್ತಿದ್ದು, ಸರ್ಕಾರಿ ವಲಯದ 72 ಸಾವಿರ ಪ್ರಮುಖ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆ ಆರಂಭವಾಗಿದೆ. ಮುಂದಿನ ಆರು ತಿಂಗಳಲ್ಲಿ ಎಲ್ಲಾ ಹುದ್ದೆಗಳ ಭರ್ತಿಗೆ ಅಧಿಸೂಚನೆ ಹೊರಡಿಸಲಾಗುವುದು. ಹಿಂದುಳಿದ ಹತ್ತು ಜಿಲ್ಲೆಗಳಲ್ಲಿ ಉದ್ಯೋಗ ಸೃಷ್ಟಿಸುವ ಉದ್ಯಮಿಗಳಿಗೆ ಪ್ರೋತ್ಸಾಹ ನೀಡಲು 'ಉದ್ಯೋಗ ನಿಧಿ' ಯೋಜನೆ ಜಾರಿಯಾಗಲಿದ್ದು, ಪ್ರತಿ ಹೊಸ ಉದ್ಯೋಗಕ್ಕೆ ತಿಂಗಳಿಗೆ ರೂ 2,500 ಪ್ರೋತ್ಸಾಹಧನ ನೀಡಲಾಗುವುದು. ಇದರಿಂದ ಒಂದು ಲಕ್ಷ ಹೊಸ ಉದ್ಯೋಗಗಳು ಸೃಷ್ಟಿಯಾಗಲಿವೆ ಎಂದು" ಹೇಳಿದರು.

**ಗ್ರಾಮೀಣ ವಿದ್ಯಾರ್ಥಿಗಳಿಗೆ ವೃತ್ತಿಪರ ಶಿಕ್ಷಣದ ಅವಕಾಶ**


"ಗ್ರಾಮೀಣ ಸರ್ಕಾರಿ ಶಾಲೆಗಳಲ್ಲಿ 1ರಿಂದ 10ನೇ ತರಗತಿವರೆಗೆ ಓದಿದ ವಿದ್ಯಾರ್ಥಿಗಳಿಗೆ ವೃತ್ತಿಪರ ಕೋರ್ಸ್‌ಗಳ ಪ್ರವೇಶದಲ್ಲಿ ಈಗಿರುವ ಶೇ.15ರ ಗ್ರಾಮೀಣ ಮೀಸಲಾತಿಯೊಳಗೆ ಶೇ.7.5 ಮೀಸಲಾತಿ ನೀಡುವ ಸಹಾಯ ಹಸ್ತ' ಯೋಜನೆ ಜಾರಿಯಾಗಲಿದೆ. ಇದರಿಂದ ವೈದ್ಯಕೀಯ, ಎಂಜಿನಿಯರಿಂಗ್ ಸೇರಿದಂತೆ ಗುಣಮಟ್ಟದ ವೃತ್ತಿಪರ ಉನ್ನತ ಶಿಕ್ಷಣದ ಅವಕಾಶಗಳು ಮತ್ತಷ್ಟು ವಿಸ್ತರಿಸಲಿವೆ" ಎಂದು ತಿಳಿಸಿದರು.

## ತಿರುಮಲ ಭಕ್ತರೇ ಎಚ್ಚರ: 259 ನಕಲಿ ವೆಬ್‌ಸೈಟ್‌ಗಳು ಬಂದ್

● ವಿಕ್ರಮ ವಾಹಿನಿ । ತಿರುಮಲ

ಶ್ರೀವಾರಿ ದರ್ಶನ, ಆರ್ಜಿತ ಸೇವೆ ಹಾಗೂ ವಸತಿ ಬುಕಿಂಗ್ ಹೆಸರಿನಲ್ಲಿ ಸೈಬರ್ ವಂಚನೆಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ತಿರುಮಲ ತಿರುಪತಿ ದೇವಸ್ಥಾನಂ (ಟಿಟಿಡಿ) ಭಕ್ತರಿಗೆ ಎಚ್ಚರಿಕೆ ನೀಡಿದೆ. ನಕಲಿ ವೆಬ್‌ಸೈಟ್‌ಗಳು, ವಾಟ್ಸಾಪ್ ಗುಂಪುಗಳು ಹಾಗೂ ಸಾಮಾಜಿಕ ಜಾಲತಾಣಗಳ ಮೂಲಕ ಭಕ್ತರಿಂದ ಹಣ ವಸೂಲಿ ಮಾಡುತ್ತಿರುವ ದೂರುಗಳು ಬಂದಿವೆ.

ಟಿಟಿಡಿಯ ಹೆಸರು, ಲೋಗೋ ಮತ್ತು ಚಿತ್ರಗಳನ್ನು ದುರುಪಯೋಗಪಡಿಸಿಕೊಂಡು ವಂಚಕರು ನಕಲಿ ಬುಕಿಂಗ್ ಪ್ಲಾಟ್‌ಫಾರ್ಮ್‌ಗಳನ್ನು ನಡೆಸುತ್ತಿದ್ದಾರೆ. ಕಳೆದ ಎರಡು ವರ್ಷಗಳಲ್ಲಿ 259 ನಕಲಿ ವೆಬ್‌ಸೈಟ್‌ಗಳನ್ನು ಪತ್ತೆಹಚ್ಚಿ ಬಂದ್ ಮಾಡಲಾಗಿದ್ದು, ಹಲವು ಪ್ರಕರಣಗಳಲ್ಲಿ ಪೊಲೀಸ್ ತನಿಖೆ ನಡೆಯುತ್ತಿದೆ.



ಭಕ್ತರು ಅಪರಿಚಿತ ಲಿಂಕ್‌ಗಳು ಹಾಗೂ ಬುಕಿಂಗ್ ಆಫರ್‌ಗಳನ್ನು ನಂಬದೆ, ಟಿಟಿಡಿಯ ಅಧಿಕೃತ ವೆಬ್‌ಸೈಟ್ ಅಥವಾ ಮೊಬೈಲ್ ಅಪ್ ಮೂಲಕ ಮಾತ್ರ ದರ್ಶನ, ಸೇವೆ ಮತ್ತು ವಸತಿ ಕಾಯ್ದಿರಿಸಬೇಕು ಎಂದು ಟಿಟಿಡಿ ಸೂಚಿಸಿದೆ. ಟಿಟಿಡಿಯ ಹೆಸರು ಮತ್ತು ಲೋಗೋ ದುರುಪಯೋಗಪಡಿಸಿಕೊಳ್ಳುವವರ ವಿರುದ್ಧ ಸೈಬರ್ ಹಾಗೂ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದೆ.

## 'ನಾನೀಗ ಸಿಎಂ ಅಲ್ಲ, ಅದಕ್ಕಾಗಿ ಹೆಚ್ಚು ಮಾತಾಡ್ತಿಲ್ಲ'

● ವಿಕ್ರಮ ವಾಹಿನಿ । ಬೆಂಗಳೂರು

ತಾವು ಮೌನವಾಗಿದ್ದಾರೆ ಎಂಬ ಚರ್ಚೆಗೆ ಪ್ರತಿಕ್ರಿಯಿಸಿರುವ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, "ನಾನು ಎಲ್ಲಿ ಸೈಲೆಂಟ್ ಆಗಿದ್ದೇನೆ? ಕಾರ್ಯಕ್ರಮಗಳಲ್ಲಿ ಭಾಗವಹಿಸುತ್ತಿದ್ದೇನೆ. ಆದರೆ ಹೆಚ್ಚು ಮಾತನಾಡುತ್ತಿಲ್ಲ ಅಷ್ಟೇ. ನಾನೀಗ ಮುಖ್ಯಮಂತ್ರಿ ಅಲ್ಲ, ಹೀಗಾಗಿ ಜವಾಬ್ದಾರಿ ಇಲ್ಲ" ಎಂದು ಹೇಳಿದ್ದಾರೆ.



ಬೆಂಗಳೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಸಂಗೊಳ್ಳಿ ರಾಯಣ್ಣ ಪ್ರತಿಮೆಗೆ ಪುಷ್ಪಾರ್ಚನೆ ಸಲ್ಲಿಸಿದ್ದು, ವಿಧಾನಸಭೆ ಅಧಿವೇಶನದಲ್ಲೂ ಭಾಗವಹಿಸಿದ್ದೇನೆ. ಪುಸ್ತಕ ಬಿಡುಗಡೆ ಕಾರ್ಯಕ್ರಮದಲ್ಲೂ ಪಾಲ್ಗೊಂಡಿದ್ದೇನೆ ಎಂದು ತಿಳಿಸಿದರು.

ಸಚಿವ ಸಂಪುಟದಲ್ಲಿ ಮಹಿಳೆಯರಿಗೆ ಹಾಗೂ ಅಲ್ಪಸಂಖ್ಯಾತರಿಗೆ ಸೂಕ್ತ ಪ್ರಾತಿನಿಧ್ಯ ನೀಡಿಲ್ಲ ಎಂಬ ಬಿಜೆಪಿ ಆರೋಪಕ್ಕೆ ಪ್ರತಿಕ್ರಿಯಿಸಿದ ಸಿದ್ದರಾಮಯ್ಯ, "ಮಹಿಳಾ ಕೋಟಾ ಭರ್ತಿಯಾಗಿಲ್ಲ ಎಂದು ಬಿಜೆಪಿಯವರು ಹೇಳುತ್ತಾರೆ. ಆದರೆ ಅವರ ಸಂಪುಟದಲ್ಲಿ ಅಲ್ಪಸಂಖ್ಯಾತರಿಗೆ ಅವಕಾಶವೇ ನೀಡಿಲ್ಲ. ಮಹಿಳೆಯರಿಗೆ ಸಚಿವ ಸ್ಥಾನ ನೀಡಬೇಕು ಎಂದು ನಾನು ಹೇಳಿದ್ದೇನೆ" ಎಂದರು.

ಬಸವರಾಜ ಶಿವಣ್ಣನವರ್ ಅವರಿಗೆ ಸಚಿವ ಸ್ಥಾನ ನೀಡುವ ಕುರಿತು ಕೇಳಿದ ಪ್ರಶ್ನೆಗೆ, "ಅದು ನನಗೆ ಗೊತ್ತಿಲ್ಲ, ಹೈಕಮಾಂಡ್ ನೋಡಿಕೊಳ್ಳುತ್ತದೆ" ಎಂದು ಉತ್ತರಿಸಿದರು. ಇದೇ ವೇಳೆ ಅಹಿಂದ ಚಳವಳಿ ಮುಂದುವರಿದಿದ್ದು, ಹಿಂದುಳಿದ ವರ್ಗಗಳ ಒಕ್ಕೂಟದ 25ನೇ ವರ್ಷದ ಕಾರ್ಯಕ್ರಮದಲ್ಲಿ ತಾವು ಭಾಗವಹಿಸುವುದಾಗಿ ಹೇಳಿದರು.

## ಕೆಎಸ್‌ಆರ್‌ಟಿಸಿ ಬಸ್‌ಗೆ ಬೆಂಕಿ; ಪ್ರಯಾಣಿಕರು ಪಾರು

● ವಿಕ್ರಮ ವಾಹಿನಿ । ಚಿಕ್ಕಬಳ್ಳಾಪುರ

ಪ್ರಯಾಣಿಕರನ್ನು ಹೊತ್ತು ಸಾಗುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್‌ಗೆ ಏಕಾಏಕಿ ಬೆಂಕಿ ಹೊತ್ತಿಕೊಂಡು ಬಹುತೇಕ ಸಂಪೂರ್ಣ ಸುಟ್ಟುಹೋದ ಘಟನೆ ಗೌರಿಬಿದನೂರು ತಾಲೂಕಿನ ಎಂ.ಗೊಲ್ಲಹಳ್ಳಿ ಗ್ರಾಮದ ಬಳಿ ನಡೆದಿದೆ. ಚಾಲಕನ ಸಮಯಪ್ರಜ್ಞೆಯಿಂದ ಬಸ್‌ನಲ್ಲಿದ್ದ ಎಲ್ಲ ಪ್ರಯಾಣಿಕರು ಯಾವುದೇ ಅಪಾಯವಿಲ್ಲದೆ ಪಾರಾಗಿದ್ದಾರೆ.

ಗೌರಿಬಿದನೂರು ಕೆಎಸ್‌ಆರ್‌ಟಿಸಿ ಘಟಕಕ್ಕೆ ಸೇರಿದ ಬಸ್ ನಗರದಿಂದ ಮರಿಪಡಿಗ್ರಾಮದತ್ತ ತೆರಳುತ್ತಿದ್ದ ವೇಳೆ ತಾಂತ್ರಿಕ ದೋಷ ಕಾಣಿಸಿಕೊಂಡು ಬೆಂಕಿ ಹೊತ್ತಿಕೊಂಡಿದೆ. ಬೆಂಕಿ ಕಾಣಿಸಿಕೊಂಡ ಕೂಡಲೇ ಚಾಲಕ ಬಸ್‌ನ್ನು ರಸ್ತೆ ಬದಿಯಲ್ಲಿ ಸುರಕ್ಷಿತವಾಗಿ ನಿಲ್ಲಿಸಿ, ಪ್ರಯಾಣಿಕರನ್ನು ತಕ್ಷಣ ಕೆಳಗಿಳಿಸಿದ್ದಾರೆ.

ನೋಡನೋಡುತ್ತಿದ್ದಂತೆ ಬೆಂಕಿ ಬಸ್‌ನ ವಿವಿಧ ಭಾಗಗಳಿಗೆ ವ್ಯಾಪಿಸಿದ್ದು, ಬಸ್‌ನ ಬಹುತೇಕ ಭಾಗ ಸುಟ್ಟುಹೋಗಿದೆ. ಮಾಹಿತಿ ಪಡೆದ ಅಗ್ನಿಶಾಮಕ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ಬೆಂಕಿ ನಂದಿಸಿದ್ದಾರೆ. ಘಟನೆಯಲ್ಲಿ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ.

ಬಸ್‌ಗೆ ಬೆಂಕಿ ಹೊತ್ತಿಕೊಳ್ಳಲು ನಿಖರ ಕಾರಣ ತಿಳಿದುಬಂದಿಲ್ಲ. ಕೆಎಸ್‌ಆರ್‌ಟಿಸಿ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದು, ತಾಂತ್ರಿಕ ತಪಾಸಣೆ ಬಳಿಕ ಕಾರಣ ಸ್ಪಷ್ಟವಾಗಲಿದೆ. ಸರ್ಕಾರಿ ಬಸ್‌ಗಳ ನಿರ್ವಹಣೆ ಹಾಗೂ ತಾಂತ್ರಿಕ ಪರಿಶೀಲನೆಯನ್ನು ಕಟ್ಟುನಿಟ್ಟಾಗಿ ನಡೆಸಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.



ಬೆಂಗಳೂರಿನ ಮಾಣಿಕ್ ಷಾ ಪರೇಡ್ ಮೈದಾನದಲ್ಲಿ ಶನಿವಾರ ನಡೆದ 80ನೇ ಸ್ವಾತಂತ್ರ್ಯ ದಿನಾಚರಣೆ ಸಮಾರಂಭದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಧ್ವಜಾರೋಹಣ ನೆರವೇರಿಸಿ ಗೌರವ ವಂದನೆ ಸ್ವೀಕರಿಸಿದರು. ಬಳಿಕ ರಾಜ್ಯದ ಜನತೆಯನ್ನುದ್ದೇಶಿಸಿ ಮಾತನಾಡಿದ ಅವರು, ಕರ್ನಾಟಕದ ಅಭಿವೃದ್ಧಿಗೆ ಸರ್ಕಾರದ ಆದ್ಯತೆಗಳು ಹಾಗೂ ಯುವಜನರು, ರೈತರು, ಉದ್ಯೋಗ ಮತ್ತು ಮೂಲಸೌಕರ್ಯ ಕ್ಷೇತ್ರಗಳಲ್ಲಿನ ಹಲವು ಮಹತ್ವದ ಯೋಜನೆಗಳನ್ನು ವಿವರಿಸಿದರು. ದೇಶದ ಸ್ವಾತಂತ್ರ್ಯ ಹೋರಾಟಗಾರರ ತ್ಯಾಗವನ್ನು ಸ್ಮರಿಸಿ, ರಾಜ್ಯದ ಅಭಿವೃದ್ಧಿಯ ತೇರನ್ನು ಎಳೆಯಲು ಕನ್ನಡಿಗರೆಲ್ಲರೂ ಕೈಜೋಡಿಸುವಂತೆ ಕರೆ ನೀಡಿದರು.

## "ತಮಿಳುನಾಡಿಗೆ ನೀರು ಬಿಡುಗಡೆ ವಿರೋಧಿಸಿ ಮಂಡ್ಯದಲ್ಲಿ ರೈತರ ಪ್ರತಿಭಟನೆ"

● ವಿಕ್ರಮ ವಾಹಿನಿ । ಮಂಡ್ಯ

80ನೇ ಸ್ವಾತಂತ್ರ್ಯ ದಿನದಂದೇ ರಾಜ್ಯ ರೈತ ಸಂಘ*ದ ನೇತೃತ್ವದಲ್ಲಿ ರೈತರು ಮಂಡ್ಯದ *ಸಂಜಯ್ ವೃತ್ತದಲ್ಲಿ ರಸ್ತೆಗಿಳಿದು ಪ್ರತಿಭಟನೆ ನಡೆಸಿದರು. ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ನಡೆದ ಪ್ರತಿಭಟನೆಯಲ್ಲಿ ರಾಜ್ಯ ಸರ್ಕಾರ ಮತ್ತು ನೀರಾವರಿ ಇಲಾಖೆ ವಿರುದ್ಧ ರೈತರು ಆಕ್ರೋಶ ವ್ಯಕ್ತಪಡಿಸಿದರು.

ರೈತರ ಪ್ರಮುಖ ಬೇಡಿಕೆಗಳು

ನಾಲೆಗಳಿಗೆ ನೀರು ಬಿಡುಗಡೆ, ಬರ ಪರಿಹಾರ, ರಸಗೊಬ್ಬರ ಪೂರೈಕೆ ಸೇರಿದಂತೆ ಹಲವು ಬೇಡಿಕೆಗಳನ್ನು ರೈತರು ಮುಂದಿಟ್ಟರು, ತಮಿಳುನಾಡಿಗೆ ಕದ್ದು ಮುಚ್ಚಿ ನೀರು ಬಿಡಲಾಗುತ್ತಿದೆ* ಎಂದು ಆಕ್ರೋಶ ವ್ಯಕ್ತಪಡಿಸಿದರು. "ನಮ್ಮಲ್ಲೇ ಕುಡಿಯುವ ನೀರಿನ ಕೊರತೆ ಇದೆ. ಆದರೂ ಸರ್ಕಾರ ತಮಿಳುನಾಡಿನ ಪರವಾಗಿ ನಿಂತಿದೆ" ಎಂದು ಘೋಷಣೆ ಕೂಗಿದರು.



ಸಚಿವರ ಭೇಟಿ ಮತ್ತು ಮನವಿ ಸ್ವೀಕಾರ

ಪ್ರತಿಭಟನಾ ಸ್ಥಳಕ್ಕೆ ಬೃಹತ್ ಮತ್ತು ಮಧ್ಯಮ ಜಲಸಂಪನ್ಮೂಲ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ* ಅವರು ಭೇಟಿ ನೀಡಿ ರೈತರ ಮನವಿಯನ್ನು ಸ್ವೀಕರಿಸಿದರು.

"ರೈತರ ಪರ ನಮ್ಮ ಸರ್ಕಾರ" – ಸಚಿವ

ಈ ವೇಳೆ ಮಾತನಾಡಿದ ಸಚಿವರು, "ಹಲವು ಸಮಸ್ಯೆ ಇಟ್ಟುಕೊಂಡು ಮಂಡ್ಯದಲ್ಲಿ ನಿರಂತರವಾಗಿ ಪ್ರತಿಭಟನೆ ನಡೆಯುತ್ತಿದೆ. ಆದರೆ ನಮ್ಮ ಸರ್ಕಾರ ನಿರಂತರವಾಗಿ ರೈತರ ಪರ ಯೋಜನೆಗಳನ್ನು ಕೊಟ್ಟಿದೆ. ಹೇಮಾವತಿ ಅಚ್ಚುಕಟ್ಟಿಗೆ ನೀರು ಬಿಡುಗಡೆಗೆ ನೀವು ಮನವಿ ಮಾಡಿದ್ದೀರಿ. ನಿಮ್ಮೆಲ್ಲಾ ಬೇಡಿಕೆಗಳನ್ನು ಶೀಘ್ರವಾಗಿ ಬಗೆಹರಿಸುತ್ತೇವೆ" ಎಂದು ಭರವಸೆ ನೀಡಿದರು.

"ಸಿಎಂ ಡಿ.ಕೆ. ಶಿವಕುಮಾರ್ ಮತ್ತು ಸಿದ್ದರಾಮಯ್ಯ ಅವರು ರೈತರ ಪರವಾಗಿದ್ದಾರೆ. ಕೇಂದ್ರ ಸರ್ಕಾರ ಕೊಡದಿದ್ದರೂ ನಮ್ಮ ರಾಜ್ಯ ಸರ್ಕಾರದಿಂದಲೇ ಬರ ಪರಿಹಾರ ಕೊಟ್ಟಿದ್ದೇವೆ. ಕಳೆದ ಬಾರಿ ಓಆಖಈ ಗಿಂತ ಹೆಚ್ಚು ಪರಿಹಾರ ನೀಡಲಾಗಿದೆ. ಐಅಅ ಸಭೆ ನಡೆಸಿ ನಾಲೆಗಳಿಗೆ ನೀರು ಬಿಡುವ ಬಗ್ಗೆ ತೀರ್ಮಾನ ಮಾಡಲಾಗುವುದು. ಸಿಎಂ ಡಿಕೆಶಿ ಮತ್ತು ನಾನು ಇಬ್ಬರೂ ರೈತರ ಜೊತೆ ಇದ್ದೇವೆ. ರೈತರು ಯಾವುದೇ ಸಮಸ್ಯೆಗೆ ಆತಂಕ ಪಡುವ ಅವಶ್ಯಕತೆ ಇಲ್ಲ" ಎಂದು ತಿಳಿಸಿದರು.

ಬರ ಘೋಷಣೆ ಬಗ್ಗೆ ಸ್ಪಷ್ಟನೆ

ಬರ ಘೋಷಣೆ ಮಾಡುವಂತೆ ರೈತರು ಪಟ್ಟು ಹಿಡಿದಾಗ ಪ್ರತಿಕ್ರಿಸಿದ ಸಚಿವರು, "ಬರ ಘೋಷಣೆ ಮಾಡಲು ಗೈಡ್‌ಲೈನ್ಸ್ ಇದೆ. ಈಗಾಗಲೇ ಒಂದು ರಿಪೋರ್ಟ್ ಕೇಂದ್ರಕ್ಕೆ ಕಳಿಸಿದ್ದೇವೆ. ಆಗಸ್ಟ್ ತಿಂಗಳ ಕೊನೆಯವರೆಗೂ ಮುಂಗಾರು ಅವಧಿ ಇದೆ. ಕೇಂದ್ರಕ್ಕೆ ರಿಪೋರ್ಟ್ ಕಳಿಸಿದ್ದೇವೆ. ರೈತರು ಆತಂಕ ಪಡಬೇಡಿ" ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಾಸಕ ರವಿಕುಮಾರ್ ಗಣಿಗ ಜಿಲ್ಲಾಧಿಕಾರಿ *ಡಾ. ಕುಮಾರ್, ಜಿ.ಪಂ. ಸಿಇಓ ನಂದಿನಿ ಸೇರಿದಂತೆ ಹಲವು ಅಧಿಕಾರಿಗಳು ಭಾಗವಹಿಸಿದ್ದರು. ಸಚಿವರ ಜೊತೆ ಮಾತುಕತೆ ನಡೆದ ಬಳಿಕ ರೈತರು ಪ್ರತಿಭಟನೆಯನ್ನು ಹಿಂತೆಗೆದುಕೊಂಡರು.



ಸ್ವಾತಂತ್ರ್ಯ ದಿನಾಚರಣೆಯಂದು ನವದೆಹಲಿಯ ನಿವಾಸದಲ್ಲಿ ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರು ಹೆಮ್ಮೆ ಹಾಗೂ ಕೃತಜ್ಞತಾ ಭಾವದಿಂದ ತ್ರಿವರ್ಣ ಧ್ವಜಾರೋಹಣ ನೆರವೇರಿಸಿದರು. 80ನೇ ಸ್ವಾತಂತ್ರ್ಯ ದಿನದಂದು ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಬಲಿಷ್ಠ, ಸ್ವಾವಲಂಬಿ ಹಾಗೂ ಅಭಿವೃದ್ಧಿ ಹೊಂದಿದ ಭಾರತ ನಿರ್ಮಾಣಕ್ಕೆ ಸಂಕಲ್ಪ ತೊಟ್ಟು, 2047ರ ವೇಳೆಗೆ 'ವಿಕಸಿತ ಭಾರತ'ದ ಗುರಿ ಸಾಕಾರಗೊಳಿಸಲು ಒಗ್ಗಟ್ಟಿನಿಂದ ಶ್ರಮಿಸೋಣ ಎಂದು ಕರೆ ನೀಡಿದರು.

## ವಿದ್ಯಾರ್ಥಿಗಳಿಗೆ ಉಚಿತ ಪುಸ್ತಕ: ಸಚಿವರ ಘೋಷಣೆ

● ವಿಕ್ರಮ ವಾಹಿನಿ । ಶಿವಮೊಗ್ಗ

ರಾಜ್ಯದ ವಿದ್ಯಾರ್ಥಿಗಳ ಶೈಕ್ಷಣಿಕ ಸೌಲಭ್ಯಗಳನ್ನು ಮತ್ತಷ್ಟು ಸುಧಾರಿಸಲು ಸರ್ಕಾರ ಹಲವು ಕ್ರಮಗಳನ್ನು ಕೈಗೊಂಡಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ.

1ನೇ ಮತ್ತು 2ನೇ ಪಿಯುಸಿ ವಿದ್ಯಾರ್ಥಿಗಳಿಗೆ ಉಚಿತ ಪಠ್ಯಪುಸ್ತಕ ವಿತರಣೆ ಆರಂಭವಾಗಿದ್ದು, ರಾಜ್ಯದ ಬಹುತೇಕ ಶಾಲೆಗಳಿಗೆ ಪುಸ್ತಕಗಳ ಪೂರೈಕೆ ಪೂರ್ಣಗೊಂಡಿದೆ. ಪ್ರವೇಶಾತಿ ಹೆಚ್ಚಿರುವ ಶಾಲೆಗಳಿಗೆ ಅಗತ್ಯಕ್ಕೆ ಅನುಗುಣವಾಗಿ ಹೆಚ್ಚುವರಿ ಪುಸ್ತಕಗಳನ್ನು ತಕ್ಷಣ ಪೂರೈಸಲು ಕ್ರಮ ಕೈಗೊಳ್ಳಲಾಗಿದೆ ಎಂದರು.

ಶಾಲಾ ವಿದ್ಯಾರ್ಥಿಗಳಿಗೆ ವಿತರಿಸಲಾಗುತ್ತಿರುವ ಶೂಗಳ ಗುಣಮಟ್ಟದ ಬಗ್ಗೆ ದೂರುಗಳು ಬಂದ ಹಿನ್ನೆಲೆಯಲ್ಲಿ ರಾಜ್ಯಮಟ್ಟದಲ್ಲಿ ಹೊಸ ಟೆಂಡರ್ ಕರೆಯಲಾಗಿದೆ. ಶೂ ಮತ್ತು ಸಾಕ್ಸ್‌ಗಳ ಅಳತೆಯಲ್ಲಿ ವ್ಯತ್ಯಾಸ ಕಂಡುಬಂದರೆ ತಕ್ಷಣ ಬದಲಾಯಿಸಿಕೊಡಲು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಕಳಪೆ ಗುಣಮಟ್ಟ ಅಥವಾ ಅಕ್ರಮ ಕಂಡುಬಂದರೆ ಟೆಂಡರ್‌ದಾರರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.



ಶಿವಮೊಗ್ಗದಲ್ಲಿ ಸಚಿವ ಮಧು ಬಂಗಾರಪ್ಪ ಶಿಕ್ಷಣ ಕ್ಷೇತ್ರದ ಪ್ರಮುಖ ಯೋಜನೆಗಳನ್ನು ಪ್ರಕಟಿಸಿದ್ದು, ಪಿಯು ವಿದ್ಯಾರ್ಥಿಗಳಿಗೆ ಉಚಿತ ಪಠ್ಯಪುಸ್ತಕ ವಿತರಣೆ ಹಾಗೂ 800 ಕೆಪಿಎಸ್ ಶಾಲೆಗಳ ಆರಂಭಕ್ಕೆ ಸಿದ್ಧತೆ ನಡೆದಿದೆ. ಶೂ–ಸಾಕ್ಸ್ ಗುಣಮಟ್ಟ ಸುಧಾರಣೆಗೆ ರಾಜ್ಯಮಟ್ಟದ ಟೆಂಡರ್ ಕರೆದು, ವಿದ್ಯಾರ್ಥಿಗಳಿಗೆ ಅಗತ್ಯ ಸೌಲಭ್ಯಗಳನ್ನು ಸಮರ್ಪಕವಾಗಿ ತಲುಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ರಾಜ್ಯದಲ್ಲಿ 800 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು (ಏಕಖ) ಆರಂಭಿಸುವ ಯೋಜನೆಗೆ ಈಗಾಗಲೇ ಅನುಮೋದನೆ ದೊರೆತಿದ್ದು, ಬಜೆಟ್ ಹೊಂದಾಣಿಕೆಯ ಬಳಿಕ ಟೆಂಡರ್ ಕರೆದು ಕಾಮಗಾರಿ ಆರಂಭಿಸಲು ಸಿದ್ಧತೆ ನಡೆಸಲಾಗಿದೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೊಂದಿಗೆ ಚರ್ಚಿಸಿ ಯೋಜನೆಗೆ ಶೀಘ್ರ ಚಾಲನೆ ನೀಡಲಾಗುವುದು ಎಂದು ಸಚಿವರು ತಿಳಿಸಿದರು.

ವಿದ್ಯಾರ್ಥಿಗಳಿಗೆ ಉಚಿತ ವಿದ್ಯುತ್, ಮಧ್ಯಾಹ್ನದ ಬಿಸಿಯೂಟ, ಹಾಲು, ಮೊಟ್ಟೆ, ಶೂ ಹಾಗೂ ಪಠ್ಯಪುಸ್ತಕ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಸಮರ್ಪಕವಾಗಿ ತಲುಪಿಸುವುದು ಸರ್ಕಾರದ ಆದ್ಯತೆಯಾಗಿದೆ ಎಂದರು.

## ಬೈಕ್ ಪಿಯುಸಿಗೆ ಇನ್ಮುಂದೆ ರೂ 80



● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದಲ್ಲಿ ವಾಹನಗಳ ಮಾಲಿನ್ಯ ನಿಯಂತ್ರಣ ಪ್ರಮಾಣಪತ್ರ (ಪಿಯುಸಿ) ಪಡೆಯುವ ಪರೀಕ್ಷಾ ಶುಲ್ಕವನ್ನು ಸಾರಿಗೆ ಇಲಾಖೆ ಪರಿಷ್ಕರಿಸಿದ್ದು, ಹೊಸ ದರಗಳು ಇಂದಿನಿಂದಲೇ ಜಾರಿಗೆ ಬಂದಿವೆ.

ವಾಯು ಮಾಲಿನ್ಯ ಪರಿವೀಕ್ಷಣಾ ಕೇಂದ್ರಗಳಲ್ಲಿ ವಾಹನಗಳ ಮಾಲಿನ್ಯ ಪರೀಕ್ಷೆ ನಡೆಸಿ ಪಿಯುಸಿ ಪ್ರಮಾಣಪತ್ರ ನೀಡುವ ಶುಲ್ಕವನ್ನು ಹೆಚ್ಚಿಸಲಾಗಿದೆ. ಪರಿಷ್ಕೃತ ದರದಂತೆ ದ್ವಿಚಕ್ರ ವಾಹನಗಳ ಶುಲ್ಕ ರೂ 65ರಿಂದ ರೂ 80ಕ್ಕೆ ಏರಿಕೆಯಾಗಿದೆ.

ಆಟೋರಿಕ್ಷಾಗಳಿಗೆ ರೂ 75ರಿಂದ ರೂ 80ಕ್ಕೆ, ಪೆಟ್ರೋಲ್, ಎಲ್‌ಪಿಜಿ ಹಾಗೂ ಸಿಎನ್‌ಜಿ ಕಾರುಗಳಿಗೆ ರೂ 115ರಿಂದ ರೂ 150ಕ್ಕೆ ಹಾಗೂ ಡೀಸೆಲ್ ವಾಹನಗಳ ಶುಲ್ಕ ರೂ 160ರಿಂದ ರೂ 200ಕ್ಕೆ ಹೆಚ್ಚಿಸಲಾಗಿದೆ. ಸಾರಿಗೆ ಇಲಾಖೆಯ ಆದೇಶದಂತೆ ರಾಜ್ಯದ ಎಲ್ಲ ಪಿಯುಸಿ ಕೇಂದ್ರಗಳಲ್ಲಿ ಪರಿಷ್ಕೃತ ಶುಲ್ಕ ಅನ್ವಯವಾಗಲಿದೆ.

## ಉದ್ದಿನ ವಡೆಯಲ್ಲಿ ಹಲ್ಲಿ; ಪ್ರವಾಸಿಗರ ಆಕ್ರೋಶ



● ವಿಕ್ರಮ ವಾಹಿನಿ । ಚಿಕ್ಕಮಗಳೂರು

ಹೊರನಾಡಿನ ಖಾಸಗಿ ಹೋಟೆಲ್‌ನಲ್ಲಿ ಪ್ರವಾಸಿಗರಿಗೆ ನೀಡಿದ ಉದ್ದಿನ ವಡೆಯಲ್ಲಿ ಸತ್ತ ಹಲ್ಲಿ ಪತ್ತೆಯಾದ ಘಟನೆ ನಡೆದಿದೆ. ಬೆಂಗಳೂರಿನಿಂದ ಬಂದಿದ್ದ ಆರು ಮಂದಿ ಪ್ರವಾಸಿಗರು ತಿಂಡಿ ಸೇವಿಸುವ ವೇಳೆ ಈ ಘಟನೆ ಬೆಳಕಿಗೆ ಬಂದಿದೆ.

ವಡೆಯಲ್ಲಿ ಹಲ್ಲಿ ಮಿಶ್ರಣವಾಗಿ ಎಣ್ಣೆಯಲ್ಲಿ ಬೆಂದಿದ್ದರಿಂದ ಆರಂಭದಲ್ಲಿ ಗಮನಕ್ಕೆ ಬಂದಿರಲಿಲ್ಲ. ಅರ್ಧ ವಡೆ ತಿಂದ ಬಳಿಕ ಸತ್ತ ಹಲ್ಲಿ ಕಾಣಿಸಿಕೊಂಡಿದೆ. ಈ ಬಗ್ಗೆ ಹೋಟೆಲ್ ಮಾಲೀಕರಿಗೆ ತಿಳಿಸಿದಾಗ ಅವರು ಸಮರ್ಪಕವಾಗಿ ಸ್ಪಂದಿಸದೆ ಜಗಳಕ್ಕೆ ಬಂದಿದ್ದಾರೆ ಎಂದು ಪ್ರವಾಸಿಗರು ಆರೋಪಿಸಿದ್ದಾರೆ.

ಮಕ್ಕಳು ಕೂಡ ವಡೆ ಸೇವಿಸಿದ್ದರಿಂದ ಆತಂಕಗೊಂಡ ಪ್ರವಾಸಿಗರು ಆರೋಗ್ಯ ತಪಾಸಣೆಗೆ ಒತ್ತಾಯಿಸಿದ್ದಾರೆ. ಹೋಟೆಲ್ ಮಾಲೀಕರು ಆಸ್ಪತ್ರೆಗೆ ಕರೆದೊಯ್ಯಲು ನಿರಾಕರಿಸಿದ ಹಿನ್ನೆಲೆಯಲ್ಲಿ ಪ್ರವಾಸಿಗರು ಪೊಲೀಸರಿಗೆ ಕರೆ ಮಾಡಿದ್ದಾರೆ.

ಸ್ಥಳಕ್ಕೆ ಬಂದ ಪೊಲೀಸರು ಮಕ್ಕಳು ಸೇರಿದಂತೆ ಆರು ಮಂದಿಯನ್ನು ಕಳಸದ ಖಾಸಗಿ ಆಸ್ಪತ್ರೆಗೆ ಕರೆದೊಯ್ದು ತಪಾಸಣೆ ಮಾಡಿಸಿದ್ದಾರೆ.

ಅದೃಷ್ಟವಶಾತ್ ಯಾರಿಗೂ ಯಾವುದೇ ಆರೋಗ್ಯ ಸಮಸ್ಯೆ ಕಂಡುಬಂದಿಲ್ಲ. ಬಳಿಕ ಪ್ರವಾಸಿಗರು ಬೆಂಗಳೂರಿಗೆ ಮರಳಿದ್ದಾರೆ. ಘಟನೆ ಕಳಸ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.

ಘಟನೆಯ ಬಳಿಕ ಪ್ರವಾಸಿಗರು ಹೋಟೆಲ್‌ನ ಆಹಾರ ಗುಣಮಟ್ಟ ಹಾಗೂ ಸ್ವಚ್ಛತೆ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಮಕ್ಕಳೂ ವಡೆ ಸೇವಿಸಿದ್ದರಿಂದ ಯಾವುದೇ ಆರೋಗ್ಯ ಸಮಸ್ಯೆ ಎದುರಾಗಬಹುದೇ ಎಂಬ ಆತಂಕ ಕುಟುಂಬಸ್ಥರಲ್ಲಿ ಮೂಡಿತ್ತು.

ವಡೆಯಲ್ಲಿ ಹಲ್ಲಿ ಪತ್ತೆಯಾದ ಬಳಿಕ ಹೋಟೆಲ್‌ನಲ್ಲಿ ಕೆಲಕಾಲ ಗೊಂದಲದ ವಾತಾವರಣ ನಿರ್ಮಾಣವಾಗಿತ್ತು. ಪ್ರವಾಸಿಗರು ಘಟನೆಯ ಬಗ್ಗೆ ಪೊಲೀಸರಿಗೆ ಮಾಹಿತಿ ನೀಡಿ, ಆಹಾರದ ಗುಣಮಟ್ಟದ ಕುರಿತು ಪರಿಶೀಲನೆ ನಡೆಸುವಂತೆ ಮನವಿ ಮಾಡಿದ್ದಾರೆ.

ಪ್ರವಾಸಿಗರ ದೂರಿನ ಹಿನ್ನೆಲೆಯಲ್ಲಿ ಘಟನೆ ಕುರಿತು ಸಂಬಂಧಪಟ್ಟ ಅಧಿಕಾರಿಗಳು ಮಾಹಿತಿ ಪಡೆದುಕೊಂಡಿದ್ದು, ಹೋಟೆಲ್‌ನ ಆಹಾರ ತಯಾರಿಕೆ ಮತ್ತು ಸ್ವಚ್ಛತಾ ವ್ಯವಸ್ಥೆಯ ಬಗ್ಗೆ ಪರಿಶೀಲನೆ ನಡೆಸುವ ಸಾಧ್ಯತೆ ಇದೆ. ಆಹಾರ ಸುರಕ್ಷತಾ ನಿಯಮಗಳನ್ನು ಉಲ್ಲಂಘಿಸಿರುವುದು ಕಂಡುಬಂದರೆ ಕ್ರಮ ಕೈಗೊಳ್ಳುವ ನಿರೀಕ್ಷೆಯಿದೆ.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

# ಫ್ರೀಡಂ ಹಬ್ಬದಲ್ಲಿ ಧ್ವಜ ಹಿಡಿದು ಸಿಎಂ ಡಿ.ಕೆ ಶಿವಕುಮಾರ್ ಉತ್ಸಾಹದ ನಡಿಗೆ

● ವಿಕ್ರಮ ವಾಹಿನಿ । ಬೆಂಗಳೂರು



ವಿಧಾನಸೌಧದ ಆವರಣದಲ್ಲಿ 80 ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ಶನಿವಾರ ಆಯೋಜಿಸಿದ್ದ "ಫ್ರೀಡಂ ಹಬ್ಬ" ದಲ್ಲಿ ಹೆಗಲ ಮೇಲೆ ತ್ರಿವರ್ಣ ಧ್ವಜ ಹೊತ್ತು ವಿಧಾನಸೌಧದ ಎದುರಿನ ರಸ್ತೆಯಲ್ಲಿ ಸಿಎಂ ಡಿ ಕೆ ಶಿವಕುಮಾರ್ ಅವರು ಉತ್ಸಾಹದಿಂದ ಹೆಜ್ಜೆ ಹಾಕಿದರು.

ವಿವಿಧೆಡೆಯಿಂದ ಶುಶ್ರೂಷಕಿಯರ ತಂಡ, ಸ್ತ್ರೀ ಜಾಗೃತಿ ಸಮಿತಿ, ತ್ಯಾಜ್ಯ ಶ್ರಮಿಕರ ಸಂಘದ ಮಹಿಳೆಯರು ಮುಖ್ಯಮಂತ್ರಿಯವರ ಜೊತೆ ತ್ರಿವರ್ಣ ಧ್ವಜ ಹಿಡಿದು ಹೆಜ್ಜೆ ಹಾಕಿದ್ದು ವಿಶೇಷವಾಗಿತ್ತು. ಈ ಸಂದರ್ಭದಲ್ಲಿ ರಸ್ತೆಯ ಇಕ್ಕೆಲಗಳಲ್ಲಿ ಕಿಕ್ಕಿರಿದು ನೆರೆದಿದ್ದ ಯುವ ಸಮುದಾಯ, ಮಕ್ಕಳು, ಪೋಷಕರಿಗೆ ಕೈ ಬೀಸಿದರು.

ಕಹಳೆ ವಾದ್ಯದೊಂದಿಗೆ ಸಿಖ್ ಪೇಟಧಾರಿಯೊಬ್ಬರು ಮುಖ್ಯಮಂತ್ರಿಯವರನ್ನು ಬರ ಮಾಡಿಕೊಂಡರು. ಪಟ್ಕಾ ಸುತ್ತಿದ್ದ ಸಿಖ್ ಮಗುವಿಗೆ ಹಸ್ತಲಾಘವ ಮಾಡಿದರು.

ನಂತರ "ಫ್ರೀಡಂ ವಾಲ್" ಬಳಿ ತೆರಳಿ ಹಸ್ತಾಕ್ಷರ ಹಾಕಿದರು. ಬ್ಯಾರಿ ನೃತ್ಯ ಮಾಡುವ ಮಕ್ಕಳ ಬಳಿಯಿದ್ದ ಚರ್ಮವಾದ್ಯವನ್ನು "ಧಫ್" ಎಂದು ನುಡಿಸಿ ಸಂಭ್ರಮಿಸಿದರು.

ಕರ್ನಾಟಕದ ವಿವಿಧ ಜಿಲ್ಲೆಗಳ ಸಂಸ್ಕೃತಿ ಬಿಂಬಿಸುವ ಪ್ರದರ್ಶನ ಮಳಿಗೆಗಳಿಗೆ ಭೇಟಿ ನೀಡಿ 'ಸ್ವಾತಂತ್ರ್ಯ ಹೋರಾಟ'ಕ್ಕೆ ಜಿಲ್ಲೆಗಳ ಕೊಡುಗೆಗಳ ಬಗ್ಗೆ ಮಾಹಿತಿ ಪಡೆದರು. ಬೆಂಗಳೂರಿನಲ್ಲಿರುವ ವಿವಿಧ ರಾಜ್ಯಗಳನ್ನು ಪ್ರತಿನಿಧಿಸುವ ವಸ್ತ್ರವಿನ್ಯಾಸ ಮಾಡಿಕೊಂಡಿದ್ದ ಮಹಿಳೆಯರು, ಯುವತಿಯರ ಕೈ ಕುಲುಕಿ ಹುಮ್ಮಸ್ಸನ್ನು ಇಮ್ಮಡಿಗೊಳಿಸಿದರು.

ಸ್ಟಾಲ್ ಗಳಲ್ಲಿ ಮಕ್ಕಳ ಜೊತೆ ಮಕ್ಕಳಾಗಿ ಬೆರೆತ ಸಿಎಂ ಡಿ ಕೆ ಶಿವಕುಮಾರ್ ಅವರು, ಕಿತ್ತೂರು ರಾಣಿ ಚೆನ್ನಮ್ಮ, ಸಂಗೊಳ್ಳಿ ರಾಯಣ್ಣ ಛದ್ಮ ವೇಷಧಾರಿಗಳ ಜೊತೆ ಫೋಟೊಗೆ ಪೋಜ್ ನೀಡುವ ಮೂಲಕ ಫ್ರೀಡಂ ಹಬ್ಬಕ್ಕೆ ಹೊಸ ರಂಗು ತುಂಬಿದರು. ನಂತರ ವಿಧಾನಸೌಧದ ಆವರಣದಲ್ಲಿ 'ಫೋಟೋ ಬೂತ್' ಗೆ ತೆರಳಿ ಫೋಟೋಗೆ ಪೋಸ್ ನೀಡಿದರು.

# ಶಾಲೆ ಛಾವಣಿ ಕುಸಿದು ವಿದ್ಯಾರ್ಥಿ ಸಾವು

● ವಿಕ್ರಮ ವಾಹಿನಿ । ಲಕ್ನೋ

ಉತ್ತರ ಪ್ರದೇಶದ ಸಂಭಾಲ್‌ನ ಅಲ್–ಹಸ್ನೈನ್ ಪಬ್ಲಿಕ್ ಶಾಲೆಯಲ್ಲಿ ಸ್ವಾತಂತ್ರ್ಯ ದಿನಾಚರಣೆ ವೇಳೆ ಶಾಲೆಯ ಮುಖ್ಯದ್ವಾರದ ಮೇಲಿದ್ದ ಕಾಂಕ್ರೀಟ್ ಛಾವಣಿ ಕುಸಿದು ಓರ್ವ ವಿದ್ಯಾರ್ಥಿ ಮೃತಪಟ್ಟಿದ್ದು, ಇಬ್ಬರು ಗಾಯಗೊಂಡಿದ್ದಾರೆ.

ಧ್ವಜಾರೋಹಣದ ಬಳಿಕ ಶಾಲೆಯಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ ನಡೆಯುತ್ತಿತ್ತು. ಈ ವೇಳೆ ಕೆಲವು ಮಕ್ಕಳು ಮುಖ್ಯದ್ವಾರದ ಮೇಲಿದ್ದ ಛಾವಣಿ ಹತ್ತಿದ್ದರು. ಮಕ್ಕಳ ತೂಕ ಹೆಚ್ಚಾದ ಪರಿಣಾಮ ರಚನೆ ಏಕಾಏಕಿ ಕುಸಿದು ಅವಘಡ ಸಂಭವಿಸಿದೆ ಎನ್ನಲಾಗಿದೆ.

ಘಟನೆಯಲ್ಲಿ ಗಾಯಗೊಂಡ ಇಬ್ಬರು ವಿದ್ಯಾರ್ಥಿಗಳನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಮಾಹಿತಿ ತಿಳಿದ ಕೂಡಲೇ ಎಸ್‌ಡಿಎಂ, ಸಿಒ ಹಾಗೂ ಎಸ್‌ಎಚ್‌ಒ ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಿದರು. ಜಿಲ್ಲಾಧಿಕಾರಿ ಅಂಕಿತ್ ಖಂಡೇಲ್ವಾಲ್, ಎಸ್‌ಪಿ ಕೃಷ್ಣ ಕುಮಾರ್ ಬಿಷ್ಣೋಯ್ ಹಾಗೂ ಮೂಲ ಶಿಕ್ಷಣಾಧಿಕಾರಿ ಅಲ್ಕಾ ಶರ್ಮಾ ಕೂಡ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಘಟನೆ ಕುರಿತು ಅಧಿಕಾರಿಗಳು ತನಿಖೆ ಕೈಗೊಂಡಿದ್ದಾರೆ.

# 'ಗ್ರಾಮೀಣ ಭಾಗದ ಜನತೆಗೆ ಉದ್ಯೋಗ ನೀಡದಿದ್ರೆ ಪಿಡಿಒ ಅಮಾನತು'

● ವಿಕ್ರಮ ವಾಹಿನಿ । ಕೊಪ್ಪಳ

ಗ್ರಾಮೀಣ ಭಾಗದ ಜನರಿಗೆ ಉದ್ಯೋಗ ಕಲ್ಪಿಸುವಲ್ಲಿ ನಿರ್ಲಕ್ಷ್ಯ ತೋರಿದರೆ ಪಿಡಿಒ ವಿರುದ್ಧ ಅಮಾನತು ಸೇರಿದಂತೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ಕನಕಗಿರಿ ಶಾಸಕ ಶಿವರಾಜ್ ತಂಗಡಗಿ ಎಚ್ಚರಿಕೆ ನೀಡಿದರು.

ಕನಕಗಿರಿ ತಾಲೂಕಿನ ಬೊಮ್ಮಸಾಗರ ತಾಂಡದಲ್ಲಿ ಸಿಸಿ ರಸ್ತೆ ಕಾಮಗಾರಿಗೆ ಚಾಲನೆ ನೀಡಿ ಸಾರ್ವಜನಿಕರ ಅಹವಾಲು ಆಲಿಸಿದ ಅವರು, ಮಳೆ ಕೊರತೆಯ ಹಿನ್ನೆಲೆಯಲ್ಲಿ ಗ್ರಾಮೀಣ ಜನರು ಗುಳೆ ಹೋಗುವುದನ್ನು ತಡೆಯಲು ವಿಬಿ–ಜಿ ರಾಮ್ ಜಿ ಯೋಜನೆಯಡಿ ಹೆಚ್ಚಿನ ಉದ್ಯೋಗ ಒದಗಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಯೋಜನೆಯ ವೈಯಕ್ತಿಕ ಹಾಗೂ ಸಮುದಾಯ ಕಾಮಗಾರಿಗಳ ಕುರಿತು ಗ್ರಾಮಸ್ಥರಿಗೆ ಮಾಹಿತಿ ನೀಡುವಂತೆ ನಿರ್ದೇಶಿಸಿದರು.

ಗ್ರಾಮಕ್ಕೆ ಸಮರ್ಪಕ ಬಸ್ ಸೌಲಭ್ಯವಿಲ್ಲದೆ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿದೆ ಹಾಗೂ ಪಂಚಾಯಿತಿ ಅಧಿಕಾರಿಗಳು ಜನರ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ ಎಂಬ ದೂರುಗಳು ಕೇಳಿಬಂದ ಹಿನ್ನೆಲೆಯಲ್ಲಿ ಸಚಿವರು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. "ಜನರ ಸಮಸ್ಯೆಗಳಿಗೆ ಸ್ಪಂದಿಸದಿದ್ದರೆ ಅಧಿಕಾರಿಗಳಾಗಿ ಏಕೆ ಇರಬೇಕು? ಮತ್ತೆ ದೂರು ಬಂದರೆ ಅಮಾನತು ಮಾಡಲಾಗುವುದು" ಎಂದು ಎಚ್ಚರಿಸಿದರು. ಅಧಿಕಾರಿಗಳು ಸ್ಪಂದಿಸದಿದ್ದಲ್ಲಿ ನೇರವಾಗಿ ತಮ್ಮನ್ನು ಸಂಪರ್ಕಿಸುವಂತೆ ಗ್ರಾಮಸ್ಥರಿಗೆ ತಿಳಿಸಿದರು.

# ರಾತ್ರಿ ಎಡಮಗ್ಗಲಿನಲ್ಲಿ ಮಲಗುವುದರ ಹಿಂದಿನ ಮರ್ಮವೇನು?

● ವಿಕ್ರಮ ವಾಹಿನಿ । ಗೋಕರ್ಣ



ಯೋಗ ದೃಷ್ಟಿಗೂ ಇಂದಿನ ಆಧುನಿಕ ವೈದ್ಯ ಪದ್ಧತಿಗೂ ವ್ಯತ್ಯಾಸಗಳಿದ್ದು. ಭಾರತೀಯ ಪರಂಪರೆಯಲ್ಲಿ ಉಲ್ಲೇಖಿತವಾಗಿರುವ ಹಲವಾರು ಅಂಶಗಳು ಕೇವಲ ಯೋಗ ದೃಷ್ಟಿಗಷ್ಟೇ ಕಾಣುವಂತವಾಗಿದ್ದು, ಇಂದಿನ ವೈದ್ಯಕೀಯ ಉಪಕರಣಗಳಿಗೆ ಅವು ಕಾಣಸಿಗುವುದಿಲ್ಲ. ಯಾರು ಒಪ್ಪಿದರೂ, ಒಪ್ಪದೇ ಇದ್ದರೂ ಶಾಸ್ತ್ರಗಳಲ್ಲಿ ಉಲ್ಲೇಖಿತ ಅಂಶಗಳು ಎಲ್ಲ ಜೀವಿಗಳಲ್ಲಿಯೂ ಇದೆ. ಇವುಗಳನ್ನು ಯೋಗ ದೃಷ್ಟಿಯಿಂದ ನಮ್ಮ ಪೂರ್ವಜರು ಕಂಡುಕೊಂಡಿದ್ದು, ಇಂದಿನ ವಿಜ್ಞಾನ ಈ ವಿಚಾರಗಳನ್ನು ಇನ್ನೂ ಕಂಡುಕೊಳ್ಳಬೇಕಿದೆಯಷ್ಟೇ ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ತಿಳಿಸಿದರು ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ತಿಳಿಸಿದರು.

ಗೋಕರ್ಣದ ಅಶೋಕೆಯ ಮೂಲಮಠದ ಪರಿಸರದಲ್ಲಿ ನಡೆಯುತ್ತಿರುವ 'ಅನ್ನಬ್ರಹ್ಮ ಚಾತುರ್ಮಾಸ್ಯ'ದ ಧರ್ಮಸಭೆಯಲ್ಲಿ ಪ್ರವಚನ ಅನುಗ್ರಹಿಸಿದ ಶ್ರೀಗಳು, ಜಠರಾಗ್ನಿಯ ಒಂದು ಪ್ರಮುಖ ಅಭಿವ್ಯಕ್ತಿ ಹಸಿವು. ಹಸಿವು ಕಾಣಿಸಿಕೊಳ್ಳುವುದು ದೇಹದಲ್ಲಿ ಜೀರ್ಣಕ್ರಿಯೆಗೆ ಸಂಬಂಧಿಸಿದ ಶಕ್ತಿ ಕಾರ್ಯನಿರ್ವಹಿಸುತ್ತಿರುವುದರ ಸೂಚನೆಯಾಗಿದೆ. ದೇಹದ ಉಷ್ಣತೆ, ಹಸಿವು ಮತ್ತು ಆಹಾರ ಜೀರ್ಣವಾಗುವ ಪ್ರಕ್ರಿಯೆಯ ಹಿಂದೆ ಕಾರ್ಯನಿರ್ವಹಿಸುವ ಶಕ್ತಿಯನ್ನೇ ಭಾರತೀಯ ಪರಂಪರೆ 'ಅಗ್ನಿ' ಎಂದು ಗುರುತಿಸಿದೆ. ಅಗ್ನಿರೂಪದ ರುದ್ರ ಜೀರ್ಣಕ್ಕೆ ಕಷ್ಟವಾಗುವ ಅನೇಕ ವಿಷಗಳನ್ನು ಜೀರ್ಣವಾಗಿಸಿ, ಅಮೃತವನ್ನಷ್ಟೇ ದೇಹಕ್ಕೆ ನೀಡುತ್ತದೆ. ದೇಹದಲ್ಲಿರುವ ಶ್ಲೇಷ್ಮದ ಅಂಶ ವಿಷ್ಣುವಿನ ರೂಪವಾಗಿದ್ದು, ಅಗ್ನಿ ಜೀರ್ಣವಾಗಿಸಿದ್ದನ್ನು ದೇಹಕ್ಕೆ ಶ್ಲೇಷ್ಮವು ಉಣ ಬಡಿಸುತ್ತದೆ. ಅಗ್ನಿಯು ತನ್ನ ಕೆಲಸವನ್ನು ನಿಲ್ಲಿಸಿದರೆ ಅದಷ್ಟೇ ಜೀವಿಯ ಮರಣಕ್ಕೆ ಕಾರಣವಾಗಬಹುದು ಎಂದು ಹೇಳಿದರು.

ಅಗ್ನಿ ಇರುವುದೆಲ್ಲಿ?: ಶಂಕರಾಚಾರ್ಯರು ತಮ್ಮ ಸೌಂದರ್ಯ ಲಹರಿಯಲ್ಲಿ ಈ ಬಗ್ಗೆ ಉಲ್ಲೇಖಿಸಿದ್ದು, ಪಂಚಭೂತಗಳನ್ನು ನಮ್ಮ ದೇಹದಲ್ಲಿ ವಿವರಿಸಿದ್ದಾರೆ. ನಾಭಿಯ ಪರಿಸರದಲ್ಲಿರುವ ಮಣಿಪೂರಕ ಚಕ್ರದಲ್ಲಿ ಅಗ್ನಿ ಇದೆ ಎಂದು ಉಲ್ಲೇಖಿಸಿದ್ದಾರೆ. ಅಷ್ಟಾಂಗ ಹೃದಯದಲ್ಲಿ ನಾಭಿಯ ಎಡಭಾಗದಲ್ಲಿ ಜಠರಾಗ್ನಿಯ ಕೇಂದ್ರವಿದೆ ಎಂದಿದ್ದು, ಭಾವಪ್ರಕಾಶದಲ್ಲಿ ನಾಭಿಯ ಎಡಭಾಗದಲ್ಲಿ ನಾಭಿಗಿಂತ ಸ್ವಲ್ಪ ಮೇಲಿದೆ ಎಂದಿದೆ. ಸುಶ್ರುತರು ನಾಭಿಸ್ಥಾನದಲ್ಲಿರುವ ಪಕ್ವಾಶಯ ಆಮಾಶಯಗಳ ಮಧ್ಯದಲ್ಲಿ ಎಂದು ಹೇಳಿದೆ.

ಅಗ್ನಿಯಲ್ಲಿ ಎರಡು ಗುಣವಿದ್ದು, ಅದು ಬೆಳಕಾಗಿ ಬೆಳಗುತ್ತದೆ ಹಾಗೂ ಅದು ಸುಡುವ ಗುಣವನ್ನೂ ಹೊಂದಿದೆ. ಜೀವಿಯ ಹೃದಯದಲ್ಲಿ ಜೀವಜ್ಯೋತಿಯಾಗಿ ಬೆಳಗಿದರೆ, ನಾಭಿ ಸ್ಥಾನದಲ್ಲಿ ಸುಡುವ ಗುಣದೊಂದಿಗೆ ಸ್ವೀಕರಿಸಿದ ಆಹಾರವನ್ನು ಪಚನಗೊಳಿಸಿ, ಅಮೃತವನ್ನು ದೇಹಕ್ಕೆ ಒದಗಿಸಿ, ಬೇಡದ ವಸ್ತುಗಳನ್ನು ದೇಹದಿಂದ ಹೊರಹಾಕುವಂತೆ ಮಾಡುತ್ತದೆ. ಅಗ್ನಿಯು ನಾಭಿಯ ಎಡಭಾಗದಲ್ಲಿರುವುದರಿಂದ ರಾತ್ರಿ ಎಡಮಗ್ಗಲಿನಲ್ಲಿ ಮಲಗಬೇಕು ಎನ್ನಲಾಗಿದ್ದು, ಆಗ ಜೀರ್ಣಕ್ರಿಯೆಗೆ ಅನುಕೂಲ ವಾತಾವರಣ ನಿರ್ಮಾಣವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಹಿರಿಯ ನ್ಯಾಯವಾದಿಗಳಾದ ಅರುಣ್ ಶ್ಯಾಮ್, ಪಿ.ಎನ್. ಮನಮೋಹನ್, ಶಂಭುಶರ್ಮಾ, ನರಸಿಂಹ, ಸ್ಥಳೀಯ ಮುಖಂಡರಾದ ಮಹೇಶ್ ಶೆಟ್ಟಿ ಕಾರ್ಯಕ್ರಮದಲ್ಲಿ ಭಾಗಿಗಳಾಗಿ, ಶ್ರೀಗಳಿಂದ ಆಶೀರ್ವಾದ ಪಡೆದರು. ಜಾಲತಾಣಿಗರ ಬಳಗದ ಪರವಾಗಿ ಉದಯಶಂಕರ ನೀರ್ಪಾಜೆ ದಂಪತಿಗಳು ಗುರುಭಿಕ್ಷಾಸೇವೆ ಸಮರ್ಪಿಸಿದರು. ಜಾಲತಾಣಿಗರ ಬಳಗದ ಸದಸ್ಯರು ಉಪಸ್ಥಿತರಿದ್ದರು.

# ಇಂಡೋನೇಷ್ಯಾದಲ್ಲಿ 7.7 ತೀವ್ರತೆಯ ಭೂಕಂಪ

● ವಿಕ್ರಮ ವಾಹಿನಿ । ಜಕಾರ್ತಾ

ಇಂಡೋನೇಷ್ಯಾದ ಫ್ಲೋರ್ಸ್ ದ್ವೀಪದಲ್ಲಿ ಶನಿವಾರ ಮುಂಜಾನೆ 7.7 ತೀವ್ರತೆಯ ಪ್ರಬಲ ಭೂಕಂಪ ಸಂಭವಿಸಿದ್ದು, ಕನಿಷ್ಠ 40 ಮಂದಿ ಮೃತಪಟ್ಟಿದ್ದಾರೆ. ಹಲವು ಕಟ್ಟಡಗಳು ಹಾಗೂ ಮನೆಗಳು ಕುಸಿದು ಭಾರಿ ಹಾನಿಯಾಗಿದ್ದು, ಸಾವಿನ ಸಂಖ್ಯೆ ಮತ್ತಷ್ಟು ಏರಿಕೆಯಾಗುವ ಆತಂಕವಿದೆ.

ಸ್ಥಳೀಯ ಕಾಲಮಾನ ಬೆಳಗ್ಗೆ 5.58ಕ್ಕೆ ಭೂಮಿಯಿಂದ ಸುಮಾರು 10 ಕಿ.ಮೀ. ಆಳದಲ್ಲಿ ಕಂಪನ ಸಂಭವಿಸಿದೆ ಎಂದು ಅಮೆರಿಕದ ಭೂವೈಜ್ಞಾನಿಕ ಸಮೀಕ್ಷೆ ತಿಳಿಸಿದೆ. ಭೂಕಂಪದ ತೀವ್ರತೆಗೆ ಜನರು ಭಯಭೀತರಾಗಿ ಮನೆಗಳಿಂದ ಹೊರಗೆ ಓಡಿಬಂದಿದ್ದು, ಕಟ್ಟಡಗಳು ಕುಸಿಯುತ್ತಿರುವ ದೃಶ್ಯಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿವೆ.

ಭೂಕಂಪದ ಬಳಿಕ ಸುನಾಮಿ ಸಂಭವಿಸುವ ಸಾಧ್ಯತೆಯ ಬಗ್ಗೆ ಇಂಡೋನೇಷ್ಯಾದ ಹವಾಮಾನ ಮತ್ತು ಭೂಭೌತಶಾಸ್ತ್ರ ಸಂಸ್ಥೆ ಎಚ್ಚರಿಕೆ ನೀಡಿತ್ತು. ಕರಾವಳಿ ಪ್ರದೇಶದ ಜನರನ್ನು ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಸೂಚಿಸಲಾಗಿತ್ತು. ಬಳಿಕ ಸುನಾಮಿ ಎಚ್ಚರಿಕೆಯನ್ನು ಹಿಂಪಡೆಯಲಾಗಿದೆ.

ಫ್ಲೋರ್ಸ್ ಪ್ರದೇಶದಲ್ಲಿ 1992ರಲ್ಲಿ 7.0 ತೀವ್ರತೆಯ ಭೂಕಂಪ ಸಂಭವಿಸಿ ಸುಮಾರು 2,500 ಮಂದಿ ಮೃತಪಟ್ಟಿದ್ದರು.

ಭೂಕಂಪದಿಂದ ಹಾನಿಗೊಳಗಾದ ಪ್ರದೇಶಗಳಲ್ಲಿ ರಕ್ಷಣಾ ಹಾಗೂ ಪರಿಹಾರ ಕಾರ್ಯಾಚರಣೆಗಳನ್ನು ತೀವ್ರಗೊಳಿಸಲಾಗಿದೆ. ಕುಸಿದ ಕಟ್ಟಡಗಳ ಅವಶೇಷಗಳಡಿ ಸಿಲುಕಿರುವವರಿಗಾಗಿ ರಕ್ಷಣಾ ಸಿಬ್ಬಂದಿ ಶೋಧ ನಡೆಸುತ್ತಿದ್ದು, ಗಾಯಾಳುಗಳನ್ನು ಸಮೀಪದ ಆಸ್ಪತ್ರೆಗಳಿಗೆ ದಾಖಲಿಸಲಾಗುತ್ತಿದೆ.

ಪ್ರಬಲ ಕಂಪನದಿಂದ ಹಲವು ಪ್ರದೇಶಗಳಲ್ಲಿ ವಿದ್ಯುತ್ ಪೂರೈಕೆ ಹಾಗೂ ಸಂವಹನ ವ್ಯವಸ್ಥೆಗೆ ಅಡಚಣೆ ಉಂಟಾಗಿದೆ. ರಸ್ತೆಗಳಲ್ಲಿ ಅವಶೇಷಗಳು ಬಿದ್ದಿರುವುದರಿಂದ ಪರಿಹಾರ ತಂಡಗಳ ಸಂಚಾರಕ್ಕೂ ಕೆಲವು ಕಡೆ ತೊಂದರೆಯಾಗಿದೆ.

ಪುನಃ ಭೂಕಂಪ ಸಂಭವಿಸುವ ಆತಂಕದಿಂದ ಹಲವು ಮಂದಿ ಮನೆಗಳಿಗೆ ತೆರಳದೆ ಹೊರಾಂಗಣ ಹಾಗೂ ಸುರಕ್ಷಿತ ಪ್ರದೇಶಗಳಲ್ಲಿ ಆಶ್ರಯ ಪಡೆದಿದ್ದಾರೆ. ಅಧಿಕಾರಿಗಳು ಮುನ್ನೆಚ್ಚರಿಕೆ ವಹಿಸುವಂತೆ ಹಾಗೂ ವದಂತಿಗಳಿಗೆ ಕಿವಿಗೊಡದಂತೆ ಜನರಿಗೆ ಸೂಚಿಸಿದ್ದಾರೆ.

**ಹಾನಿಯ ಸಮಗ್ರ ಪರಿಶೀಲನೆ**

ಭೂಕಂಪದಿಂದ ಹಾನಿಗೊಳಗಾದ ಮನೆಗಳು, ಕಟ್ಟಡಗಳು ಹಾಗೂ ಸಾರ್ವಜನಿಕ ಆಸ್ತಿಗಳ ಕುರಿತು ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ. ಮೃತರು ಮತ್ತು ಗಾಯಾಳುಗಳ ಸಂಖ್ಯೆ, ಆಸ್ತಿ ಹಾನಿಯ ಕುರಿತು ಹೆಚ್ಚಿನ ಮಾಹಿತಿ ಸಂಗ್ರಹಿಸಲಾಗುತ್ತಿದೆ. ಭೂಕಂಪ ಪೀಡಿತರಿಗೆ ಅಗತ್ಯ ನೆರವು ಒದಗಿಸಲು ಸ್ಥಳೀಯ ಆಡಳಿತ ತುರ್ತು ಕ್ರಮಗಳನ್ನು ಕೈಗೊಂಡಿದೆ.

# ಹೊಸ ಕಾನೂನು ವಿವಿಗೆ ಉತ್ತರ ಕರ್ನಾಟಕ ವಿರೋಧ

● ವಿಕ್ರಮ ವಾಹಿನಿ । ಹುಬ್ಬಳ್ಳಿ

ಅನುದಾನದ ಕೊರತೆಯಿಂದ ಬಳಲುತ್ತಿರುವ ಹುಬ್ಬಳ್ಳಿಯ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯವನ್ನು ಮೊದಲು ಬಲಪಡಿಸುವ ಬದಲು ಬೆಂಗಳೂರಿನಲ್ಲಿ ಮತ್ತೊಂದು ಕಾನೂನು ವಿಶ್ವವಿದ್ಯಾಲಯ ಆರಂಭಿಸಲು ಸರ್ಕಾರ ಚಿಂತನೆ ನಡೆಸಿರುವುದು ಉತ್ತರ ಕರ್ನಾಟಕದ ಜನರ ಆಕ್ರೋಶಕ್ಕೆ ಕಾರಣವಾಗಿದೆ.

2009ರಲ್ಲಿ ಆರಂಭವಾದ ಹುಬ್ಬಳ್ಳಿ ಕಾನೂನು ವಿವಿಯ ವ್ಯಾಪ್ತಿಯಲ್ಲಿ 174 ಕಾನೂನು ಕಾಲೇಜುಗಳಿದ್ದು, ಖಾಯಂ ಬೋಧಕ ಸಿಬ್ಬಂದಿ, ಹಾಸ್ಟೆಲ್, ಆಡಳಿತ ಭವನ ಸೇರಿದಂತೆ ಹಲವು ಮೂಲಸೌಕರ್ಯಗಳ ಕೊರತೆ ಇದೆ. ವಿವಿ ಅಭಿವೃದ್ಧಿಗಾಗಿ ₹100 ಕೋಟಿ ಅನುದಾನ ಕೋರಿ ಎರಡು ವರ್ಷಗಳ ಹಿಂದೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದರೂ ಇನ್ನೂ ಅನುದಾನ ದೊರೆತಿಲ್ಲ.

ಈ ನಡುವೆ ಬೆಂಗಳೂರು ಅಥವಾ ಬೆಂಗಳೂರು ದಕ್ಷಿಣ ಜಿಲ್ಲೆಯಲ್ಲಿ ಮತ್ತೊಂದು ಕಾನೂನು ವಿವಿ ಸ್ಥಾಪಿಸುವ ಕುರಿತು ಸರ್ಕಾರ ಮಾಹಿತಿ ಕೇಳಿರುವುದು ವಿವಿ ವ್ಯಾಪ್ತಿಯ ಕಾಲೇಜುಗಳ ಸಂಖ್ಯೆ ಕಡಿಮೆಯಾಗುವ ಆತಂಕಕ್ಕೆ ಕಾರಣವಾಗಿದೆ. ಮೊದಲು ಹುಬ್ಬಳ್ಳಿ ವಿವಿಗೆ ಅಗತ್ಯ ಅನುದಾನ ನೀಡಿ ಬಲಪಡಿಸಬೇಕು. ಹೊಸ ವಿವಿ ಆರಂಭಿಸಿದರೆ ಹೋರಾಟ ನಡೆಸಲಾಗುವುದು ಎಂದು ಉತ್ತರ ಕರ್ನಾಟಕದ ಹೋರಾಟಗಾರರು ಎಚ್ಚರಿಸಿದ್ದಾರೆ.

ಬೆಂಗಳೂರು ಭಾಗಕ್ಕೆ ಅನುಕೂಲ ಕಲ್ಪಿಸುವ ಉದ್ದೇಶದಿಂದ ಹೊಸ ವಿವಿ ಸ್ಥಾಪಿಸುವ ಬದಲು, ಈಗಿರುವ ವಿವಿಗೆ ಅಗತ್ಯ ಅನುದಾನ ನೀಡಬೇಕು ಎಂದು ಆಗ್ರಹಿಸಲಾಗಿದೆ.

# ನವಿಮುಂಬೈನಲ್ಲಿ ವಿಶಿಷ್ಟ ಮಾನವ ಸರಪಳಿಯೊಂದಿಗೆ ಸ್ವಾತಂತ್ರ್ಯೋತ್ಸವ ಸಂಭ್ರಮ

● ವಿಕ್ರಮ ವಾಹಿನಿ । ನವಿಮುಂಬೈ




ಭಾರತದ 80ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ನವಿಮುಂಬೈ ಮಹಾನಗರದಲ್ಲಿ ವಿಶಿಷ್ಟವಾದ ಮಾನವ ಸರಪಳಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಸಾವಿರಾರು ದೇಶಪ್ರೇಮಿಗಳು ಉತ್ಸಾಹದಿಂದ ಭಾಗವಹಿಸಿ, 'ವಂದೇ ಮಾತರಂ' ರಾಷ್ಟ್ರಗೀತೆಯನ್ನು ಸಾಮೂಹಿಕವಾಗಿ ಹಾಡುವ ಮೂಲಕ ದೇಶಭಕ್ತಿಯನ್ನು ಮೆರೆದರು.

ಆಯೋಜಕರ ಆಹ್ವಾನದ ಮೇರೆಗೆ ಪರಮಪೂಜ್ಯ ಶ್ರೀ ಪುತ್ತಿಗೆ ಮಠಾಧೀಶರಾದ ಶ್ರೀ ಶ್ರೀ ಸುಗುಣೇಂದ್ರ ತೀರ್ಥ ಶ್ರೀಪಾದರು ಕಾರ್ಯಕ್ರಮದಲ್ಲಿ ಭಾಗವಹಿಸಿ, ಭಾರತಮಾತೆಗೆ ಆರತಿ ಬೆಳಗಿ ಗೌರವ ಸಮರ್ಪಿಸಿದರು. ಬಳಿಕ ಸ್ವಾತಂತ್ರ್ಯೋತ್ಸವದ ಸಂಭ್ರಮದಲ್ಲಿ ಪಾಲ್ಗೊಂಡು ನೆರೆದಿದ್ದ ಜನತೆಗೆ ಆಶೀರ್ವಚನ ನೀಡಿದರು.

ಸ್ವಾತಂತ್ರ್ಯ ದಿನಾಚರಣೆಯ ವಿಶೇಷ ಕಾರ್ಯಕ್ರಮವಾಗಿ ಆಯೋಜಿಸಲಾದ ಈ ಬೃಹತ್ ಮಾನವ ಸರಪಳಿ ನವಿಮುಂಬೈಯ ಜನತೆಯ ಗಮನ ಸೆಳೆದು, ದೇಶಪ್ರೇಮ ಮತ್ತು ರಾಷ್ಟ್ರೀಯ ಏಕತೆಯ ಸಂದೇಶವನ್ನು ಸಾರಿತು.

# ಗುಟ್ಕಾ ನಿಷೇಧ ವಾಪಸ್ ಇಲ್ಲ: ಖಾದರ್ ಸ್ಪಷ್ಟನೆ

● ವಿಕ್ರಮ ವಾಹಿನಿ । ಬೆಂಗಳೂರು



ರಾಜ್ಯದಲ್ಲಿ ನಿಕೋಟಿನ್‌ಯುಕ್ತ ಗುಟ್ಕಾ ಹಾಗೂ ಪಾನ್ ಮಸಾಲ ನಿಷೇಧಿಸುವ ಆದೇಶವನ್ನು ಹಿಂಪಡೆದಿಲ್ಲ ಎಂದು ಆರೋಗ್ಯ ಸಚಿವ ಯು.ಟಿ. ಖಾದರ್ ಸ್ಪಷ್ಟಪಡಿಸಿದ್ದಾರೆ. ನಿಕೋಟಿನ್ ನಿಷೇಧದಿಂದ ಅಡಿಕೆ ಬೆಳೆಗಾರರಿಗೆ ಯಾವುದೇ ತೊಂದರೆಯಾಗುವುದಿಲ್ಲ ಎಂದಿರುವ ಅವರು, ರೈತರು ಹಾಗೂ ಅಡಿಕೆ ವ್ಯಾಪಾರಿಗಳ ಹಿತ ಕಾಪಾಡಲು ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಖಾದರ್, ಪಾನ್ ಮಸಾಲದಲ್ಲಿ ನಿಕೋಟಿನ್ ಇರಬಾರದು ಎಂಬ ನಿರ್ಧಾರವನ್ನು ಜನರ ಆರೋಗ್ಯದ ಹಿತದೃಷ್ಟಿಯಿಂದ ಕೈಗೊಳ್ಳಲಾಗಿದೆ. ಇದರಿಂದ ಅಡಿಕೆ ಬೆಳೆಗಾರರ ಮೇಲೆ ಪ್ರತಿಕೂಲ ಪರಿಣಾಮ ಬೀರುವುದಿಲ್ಲ. ಅಡಿಕೆ ಬೆಳೆಗಾರರು, ರೈತರು ಹಾಗೂ ವ್ಯಾಪಾರಿಗಳಿಗೆ ಸರ್ಕಾರದಿಂದ ಅಗತ್ಯ ಬೆಂಬಲ ಮುಂದುವರಿಯಲಿದೆ ಎಂದು ಹೇಳಿದರು.

ನಿಕೋಟಿನ್‌ಯುಕ್ತ ಉತ್ಪನ್ನಗಳ ಮೇಲಿನ ನಿರ್ಬಂಧದಿಂದ ಅಡಿಕೆ ಬೆಲೆ ಕುಸಿಯುವ ಆತಂಕ ಅಗತ್ಯವಿಲ್ಲ.

ನಿಷೇಧದಿಂದ ಅಡಿಕೆ ಬೆಳೆಗಾರರು ಹಾಗೂ ವ್ಯಾಪಾರಿಗಳಿಗೆ ತೊಂದರೆಯಾಗಲಿದೆ ಎಂಬ ಆತಂಕಕ್ಕೆ ಪ್ರತಿಕ್ರಿಯಿಸಿದ ಅವರು, ಮೂರು ತಿಂಗಳು ಪರಿಸ್ಥಿತಿಯನ್ನು ಗಮನಿಸಿ ಎಂದು ಮನವಿ ಮಾಡಿದರು. ಸರ್ಕಾರದ ನಿರ್ಧಾರದಿಂದ ಅಡಿಕೆ ವಲಯಕ್ಕೆ ಹಾನಿಯಾಗುವುದಿಲ್ಲ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಇದೇ ವೇಳೆ, ಅಡಿಕೆ ಬೆಳೆಗಾರರ ಸಮಸ್ಯೆ ಕುರಿತು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೊಂದಿಗೆ ಚರ್ಚೆ ನಡೆದಿದ್ದು, ರೈತರ ಹಿತ ಕಾಪಾಡುವಂತೆ ಮುಖ್ಯಮಂತ್ರಿಯೂ ಸೂಚಿಸಿದ್ದಾರೆ ಎಂದು ಖಾದರ್ ತಿಳಿಸಿದರು. ಜನರ ಆರೋಗ್ಯದ ದೃಷ್ಟಿಯಿಂದ ನಿಕೋಟಿನ್ ನಿಯಂತ್ರಣ ಅಗತ್ಯವಾಗಿದ್ದು, ಈ ವಿಚಾರದಲ್ಲಿ ಸರ್ಕಾರದ ನಿಲುವು ಸ್ಪಷ್ಟವಾಗಿದೆ ಎಂದರು.

# 15 ಸಾವಿರ ಹೊಸ ಬಸ್ ಖರೀದಿಗೆ ಚಾಲನೆ

● ವಿಕ್ರಮ ವಾಹಿನಿ । ಚಿಕ್ಕಬಳ್ಳಾಪುರ



**ಗ್ರಾಮೀಣ ಹಾಗೂ ಸಾರಿಗೆ ವಂಚಿತ ಪ್ರದೇಶಗಳಿಗೆ ಸಂಪರ್ಕ ಕಲ್ಪಿಸುವ ಉದ್ದೇಶದಿಂದ ನಾಲ್ಕು ಸರ್ಕಾರಿ ಸಾರಿಗೆ ನಿಗಮಗಳ ಮೂಲಕ 15 ಸಾವಿರಕ್ಕೂ ಹೆಚ್ಚು ಹೊಸ ಬಸ್‌ಗಳ ಖರೀದಿ ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ ಎಂದು ಸಚಿವ ಬೈರತಿ ಸುರೇಶ್ ತಿಳಿಸಿದರು. 10 ಲಕ್ಷ ವಿದ್ಯಾರ್ಥಿಗಳಿಗೆ 286 ಕೋಟಿ ವೆಚ್ಚದಲ್ಲಿ ಉಚಿತ ಬಸ್ ಪಾಸ್ ವಿತರಿಸಲಾಗಿದ್ದು, ಯುವಜನರ ಉದ್ಯೋಗ, ರೈತರ ನೆರವು ಹಾಗೂ ಮಕ್ಕಳ ಸ್ಕ್ರೀನ್ ಟೈಮ್ ನಿಯಂತ್ರಣಕ್ಕೂ ಸರ್ಕಾರ ಆದ್ಯತೆ ನೀಡುತ್ತಿದೆ ಎಂದರು.**

ರಾಜ್ಯದ ಗ್ರಾಮೀಣ ಹಾಗೂ ಸಾರಿಗೆ ಸೌಲಭ್ಯದಿಂದ ವಂಚಿತ ಪ್ರದೇಶಗಳಿಗೆ ಸಾರ್ವಜನಿಕ ಸಾರಿಗೆ ವ್ಯವಸ್ಥೆ ವಿಸ್ತರಿಸುವ ಉದ್ದೇಶದಿಂದ ನಾಲ್ಕು ಸರ್ಕಾರಿ ಸಾರಿಗೆ ನಿಗಮಗಳ ಮೂಲಕ 15 ಸಾವಿರಕ್ಕೂ ಹೆಚ್ಚು ಹೊಸ ಬಸ್‌ಗಳನ್ನು ಖರೀದಿಸುವ ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ ಎಂದು ಸಾರಿಗೆ ಸಚಿವ ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವ ಬೈರತಿ ಸುರೇಶ್ ತಿಳಿಸಿದರು.

80ನೇ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಚಿಕ್ಕಬಳ್ಳಾಪುರ ಜಿಲ್ಲಾ ಕ್ರೀಡಾಂಗಣದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ರಾಜ್ಯದ ಜನರಿಗೆ ಗುಣಮಟ್ಟದ ಹಾಗೂ ಸುಗಮ ಸಾರಿಗೆ ಸೇವೆ ಒದಗಿಸುವುದು ಸರ್ಕಾರದ ಪ್ರಮುಖ ಆದ್ಯತೆಗಳಲ್ಲಿ ಒಂದಾಗಿದೆ. ಹಣಕಾಸಿನ ಲಭ್ಯತೆಗೆ ಅನುಗುಣವಾಗಿ ಹಂತ ಹಂತವಾಗಿ ಹೊಸ ಬಸ್‌ಗಳನ್ನು ಖರೀದಿಸಿ ಸರ್ಕಾರಿ ಸಾರಿಗೆ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಲಾಗುವುದು ಎಂದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಆಶಯದಂತೆ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ನೀಡುವ ಯೋಜನೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲಾಗಿದೆ. ಸುಮಾರು 10 ಲಕ್ಷ ವಿದ್ಯಾರ್ಥಿಗಳಿಗೆ ₹286 ಕೋಟಿ ವೆಚ್ಚದಲ್ಲಿ ಉಚಿತ ಬಸ್ ಪಾಸ್ ವಿತರಿಸಲಾಗಿದೆ ಎಂದು ಸಚಿವರು ತಿಳಿಸಿದರು.

ಹೊಸ ಬಸ್‌ಗಳ ಸೇರ್ಪಡೆಯಿಂದ ಸಾರಿಗೆ ವ್ಯವಸ್ಥೆ ಇಲ್ಲದ ಗ್ರಾಮಗಳು ಹಾಗೂ ಹಿಂದುಳಿದ ಪ್ರದೇಶಗಳಿಗೆ ಸಂಪರ್ಕ ಕಲ್ಪಿಸುವುದರ ಜೊತೆಗೆ ವಿದ್ಯಾರ್ಥಿಗಳು, ಕಾರ್ಮಿಕರು ಮತ್ತು ಗ್ರಾಮೀಣ ಜನರ ಪ್ರಯಾಣದ ಸಮಸ್ಯೆಗಳಿಗೆ ಪರಿಹಾರ ದೊರೆಯಲಿದೆ. ಸಾರ್ವಜನಿಕರ ಅಗತ್ಯಕ್ಕೆ ಅನುಗುಣವಾಗಿ ಬಸ್ ಸೇವೆಗಳನ್ನು ವಿಸ್ತರಿಸಲಾಗುವುದು ಎಂದರು.

ಸ್ವಾತಂತ್ರ್ಯವೆಂದರೆ ಕೇವಲ ಬ್ರಿಟಿಷರ ಆಳ್ವಿಕೆಯಿಂದ ಮುಕ್ತಿ ಪಡೆಯುವುದಲ್ಲ. ಬಡತನ, ಅನಕ್ಷರತೆ, ಭ್ರಷ್ಟಾಚಾರ ಮತ್ತು ಅಸಮಾನತೆಯಿಂದಲೂ ಮುಕ್ತರಾಗುವುದು ನಿಜವಾದ ಸ್ವಾತಂತ್ರ್ಯದ ಆಶಯವಾಗಿದೆ.

ಈ ನಿಟ್ಟಿನಲ್ಲಿ ಸರ್ಕಾರ ಜನರ ಜೀವನಮಟ್ಟ ಸುಧಾರಿಸಲು ಪಂಚ ಗ್ಯಾರಂಟಿ ಸೇರಿದಂತೆ ಹಲವು ಜನಪರ ಯೋಜನೆಗಳನ್ನು ಜಾರಿಗೊಳಿಸಿದೆ ಎಂದು ಬೈರತಿ ಸುರೇಶ್ ಹೇಳಿದರು.

ಬರ ಪರಿಸ್ಥಿತಿಯ ನಡುವೆಯೂ ರೈತರಿಗೆ ಅಗತ್ಯ ನೆರವು ಒದಗಿಸಲು ಸರ್ಕಾರ ಕ್ರಮ ಕೈಗೊಂಡಿದೆ. ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ನಿವಾರಣೆ, ಜಾನುವಾರುಗಳಿಗೆ ಮೇವು ಪೂರೈಕೆ ಹಾಗೂ ಬರ ಪರಿಹಾರ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ರಾಜ್ಯದ ಯುವಜನರ ನಿರುದ್ಯೋಗ ಸಮಸ್ಯೆ ನಿವಾರಣೆಗೆ ವಿವಿಧ ಇಲಾಖೆಗಳಲ್ಲಿರುವ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆ ನಡೆಯುತ್ತಿದೆ. ಯುವಕರಲ್ಲಿ ಕ್ರೀಡಾ ಮನೋಭಾವ, ನಾಯಕತ್ವ ಗುಣ ಹಾಗೂ ಸಾಮಾಜಿಕ ಜವಾಬ್ದಾರಿ ಬೆಳೆಸುವ ಉದ್ದೇಶದಿಂದ 'ಭಾರತ್ ಜೋಡೋ' ಯೋಜನೆ ರೂಪಿಸಲಾಗುತ್ತಿದೆ ಎಂದು ಸಚಿವರು ಹೇಳಿದರು.

ಇಂದಿನ ಮಕ್ಕಳಲ್ಲಿ ಹೆಚ್ಚುತ್ತಿರುವ ಮೊಬೈಲ್ ಹಾಗೂ ಸಾಮಾಜಿಕ ಜಾಲತಾಣ ಬಳಕೆಯನ್ನು ನಿಯಂತ್ರಿಸುವ ನಿಟ್ಟಿನಲ್ಲಿ 16 ವರ್ಷದೊಳಗಿನ ಮಕ್ಕಳ ಸ್ಕ್ರೀನ್ ಟೈಮ್ ಕಡಿಮೆ ಮಾಡುವ ಯೋಜನೆ ರೂಪಿಸಲಾಗುತ್ತಿದೆ. ಮಕ್ಕಳ ಆರೋಗ್ಯಕರ ಬೆಳವಣಿಗೆ ಹಾಗೂ ಭವಿಷ್ಯವನ್ನು ಗಮನದಲ್ಲಿಟ್ಟುಕೊಂಡು ಈ ಕುರಿತು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದರು.

ಹಿಂದೆ ನಗರಾಭಿವೃದ್ಧಿ ಸಚಿವರಾಗಿದ್ದ ಸಂದರ್ಭದಲ್ಲಿ ಭೂ–ಗ್ಯಾರಂಟಿ ಯೋಜನೆ ಅನುಷ್ಠಾನಕ್ಕೆ ಅಗತ್ಯ ಕಾನೂನು ತಿದ್ದುಪಡಿಗಳನ್ನು ಮಾಡಲಾಗಿತ್ತು.

ಜನರಿಗೆ ಇ–ಖಾತೆ ಸುಲಭವಾಗಿ ದೊರೆಯುವಂತೆ ಅಭಿಯಾನ ಆರಂಭಿಸಲಾಗಿದ್ದು, ಬಿ–ಖಾತೆಯಿಂದ ಎ–ಖಾತೆಗೆ ಪರಿವರ್ತನೆಗೆ ಅಗತ್ಯ ನಿಯಮಾವಳಿಗಳನ್ನು ರೂಪಿಸಲಾಗಿದೆ ಎಂದು ಸಚಿವರು ವಿವರಿಸಿದರು.

# 'ನೈಜೀರಿಯಾದ ಕತ್ತಲಲ್ಲಿ ಕಾರಿನ ಬಾಗಿಲು ಬಡಿದ ಮಕ್ಕಳು ಇಂದು ವೈದ್ಯರು'

● ವಿಕ್ರಮ ವಾಹಿನಿ । ಬೆಂಗಳೂರು



ನೈಜೀರಿಯಾದಲ್ಲಿ ಕತ್ತಲಿನಲ್ಲಿ ತಮ್ಮ ಕಾರಿನ ಬಾಗಿಲು ಬಡಿದ ಇಬ್ಬರು ಮಕ್ಕಳು ವೈದ್ಯರಾಗಬೇಕು ಎಂದು ಕೇಳಿಕೊಂಡಿದ್ದರು. ಇಂದು ಅದೇ ಮಕ್ಕಳು ಮುದ್ದೇನಹಳ್ಳಿಯಲ್ಲಿ ವೈದ್ಯಕೀಯ ಶಿಕ್ಷಣ ಪಡೆಯುತ್ತಿದ್ದಾರೆ ಎಂದು 'ಒನ್ ವರ್ಲ್ಡ್ ಒನ್ ಫ್ಯಾಮಿಲಿ ಮಿಷನ್' ಸಂಸ್ಥಾಪಕ ಸದ್ಗುರು ಶ್ರೀ ಮಧುಸೂದನ ಸಾಯಿ ಹೇಳಿದರು.

ಅರಮನೆ ಮೈದಾನದಲ್ಲಿ ಶುಕ್ರವಾರ ನಡೆದ 'ದಿವ್ಯ ಸಂಜೆ' ಸಂವಾದದಲ್ಲಿ ಸಂಗೀತ ಕಲಾವಿದ ರಿಕಿ ಕೇಜ್ ಅವರ ಪ್ರಶ್ನೆಗಳಿಗೆ ಉತ್ತರಿಸಿದ ಅವರು, ಸೇವೆಗೆ ದೇಶ, ಭಾಷೆ ಮತ್ತು ಗಡಿಗಳ ಮಿತಿ ಇಲ್ಲ ಎಂದರು. ಆಹಾರ, ಶಿಕ್ಷಣ ಮತ್ತು ಆರೋಗ್ಯ ಪ್ರತಿಯೊಬ್ಬರ ಮೂಲಭೂತ ಹಕ್ಕು. ಸಮಾಜದ ದುರ್ಬಲ ವ್ಯಕ್ತಿಯೂ ಗೌರವದಿಂದ ಬದುಕುವಂತಾಗಬೇಕು ಎಂಬುದೇ ನಮ್ಮ ಸೇವೆಯ ಉದ್ದೇಶ ಎಂದು ಹೇಳಿದರು.

ನೈಜೀರಿಯಾ, ನೇಪಾಳ, ಫಿಜಿ, ಶ್ರೀಲಂಕಾ ಸೇರಿದಂತೆ ಹಲವು ದೇಶಗಳಲ್ಲಿ ಮಿಷನ್ ಸೇವೆ ಸಲ್ಲಿಸುತ್ತಿದೆ. ವಿದೇಶಿ ಮಕ್ಕಳಿಗೆ ಶಿಕ್ಷಣ ನೀಡಿ, ಅವರು ಮುಂದೆ ತಮ್ಮ ದೇಶಗಳಿಗೆ ಮರಳಿ ಸೇವೆ ಸಲ್ಲಿಸುವಂತೆ ಮಾಡುವುದು ಭಾರತದ ಮಾನವೀಯ ಕೊಡುಗೆ ಎಂದರು. 'ವಸುಧೈವ ಕುಟುಂಬಕಂ' ಎಂಬ ಭಾರತೀಯ ಆಶಯವೇ 'ಒನ್ ವರ್ಲ್ಡ್ ಒನ್ ಫ್ಯಾಮಿಲಿ'ಯ ಸಂದೇಶವಾಗಿದೆ ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ನೇಪಾಳ ಮೂಲದ ಶ್ರೀಶಾ ಸಾಯಿಪ್ರಿಯಾ ತನ್ನ ಜೀವನದ ನೋವು ಮತ್ತು ಕನಸನ್ನು ಹಂಚಿಕೊಂಡರು. ವೈದ್ಯಕೀಯ ಚಿಕಿತ್ಸೆ ಸಿಗದೆ ಒಂದೂವರೆ ವರ್ಷದ ವಯಸ್ಸಿನಲ್ಲಿ ತಾಯಿಯನ್ನು ಕಳೆದುಕೊಂಡಿದ್ದ ಅವರು, ಬಳಿಕ ತಂದೆಯಿಂದ ದೂರವಾಗಿ ಸಂಸ್ಥೆಯ ಆಶ್ರಯ ಪಡೆದಿದ್ದರು. ಇದೀಗ ನೀಟ್‌ಗೆ ಸಿದ್ಧತೆ ನಡೆಸುತ್ತಿರುವ ಶ್ರೀಶಾ, ವೈದ್ಯೆಯಾಗಿ ತನ್ನ ಹಳ್ಳಿಗೆ ಮರಳಿ ಸೇವೆ ಸಲ್ಲಿಸುವ ಗುರಿ ಹೊಂದಿದ್ದಾರೆ.

"ನನಗೆ ಇಲ್ಲಿ ಶಿಕ್ಷಣ, ಆಹಾರ, ವಸತಿ ಮಾತ್ರವಲ್ಲ; ಪ್ರೀತಿ ಮತ್ತು ದೊಡ್ಡ ಕುಟುಂಬವೂ ಸಿಕ್ಕಿದೆ. ನನ್ನಂತೆ ಯಾವುದೇ ಮಗು ತಾಯಿಯನ್ನು ಕಳೆದುಕೊಳ್ಳಬಾರದು" ಎಂಬ ಅವರ ಮಾತು ಸಭಿಕರನ್ನು ಭಾವುಕರನ್ನಾಗಿಸಿತು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಸೇವಾ ಚಟುವಟಿಕೆಗಳ ಪರಿಚಯ, ವಿದ್ಯಾರ್ಥಿಗಳ ಉಪನಿಷತ್ ಪಾರಾಯಣ ಹಾಗೂ ಆರ್ಕೆಸ್ಟ್ರಾ ಪ್ರದರ್ಶನ ನಡೆಯಿತು. ಸಮಾಜ ಕಲ್ಯಾಣ ಸಚಿವ ಕೆ.ಎಚ್. ಮುನಿಯಪ್ಪ, ಛಲವಾದಿ ನಾರಾಯಣಸ್ವಾಮಿ, ಟಿ.ಬಿ. ಜಯಚಂದ್ರ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 140,